# ಜನಶ್ರೀ ಟೈಮ್ಸ್

JANASHREE TIMES KANNADA DAILY NEWS PAPER

ಕನ್ನಡ ದಿನಪತ್ರಿಕೆ

PRGI NO : KNKAN/26/A0482


ಜನಶ್ರೀವಾಣಿ

ಜನರಿಂದ ಮತ ಪಡೆದು ಹಿತ ಕಾಯಲಿಲ್ಲ, ಖುರ್ಚಿಗಾಗಿ ಮತದ ಮೌಲ್ಯವನ್ನೇ ಕಳೆವುದೆಂತು ಸರಿ..?

■ ಆನಂದಯ್ಯ ವಿರಕ್ತಮಠ
ಸಂಪಾದಕರು: ಜನಶ್ರೀ ಟೈಮ್ಸ್


ಸಂಪಾದಕರು: ಆನಂದಯ್ಯ ವಿರಕ್ತಮಠ

ಸಂಪುಟ: 01 ಸಂಚಿಕೆ: 51 ಪುಟಗಳು: 04 ಬೆಲೆ: 02 ರೂ. ದಿನಾಂಕ: 21-08-2026 ಶುಕ್ರವಾರ 73536 56555


# ರಾಜ್ಯದಲ್ಲಿ 25,921 ಪಾಲಿಟೆಕ್ನಿಕ್ ಸೀಟುಗಳು ಖಾಲಿ : ಸಚಿವ ರಾಯರೆಡ್ಡಿ



ಬೆಂಗಳೂರು: ರಾಜ್ಯದಲ್ಲಿ 120 ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು ಮಂಜೂರಾಗಿದ್ದು, 117 ಪಾಲಿಟೆಕ್ನಿಕ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ 72,057 ಸೀಟುಗಳು ಲಭ್ಯವಿದ್ದು, ಪೂರ್ಣ ಪ್ರಮಾಣದಲ್ಲಿ ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಿಲ್ಲ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ವಿಧಾನಸಭೆಗೆ ತಿಳಿಸಿದರು.

ರಾಜ್ಯದಲ್ಲಿ 25,921 ಪಾಲಿಟೆಕ್ನಿಕ್ ಸೀಟುಗಳು ಪ್ರವೇಶ ಪಡೆಯದೆ ಖಾಲಿ ಉಳಿದಿವೆ ಎಂದು ಅವರು ಹೇಳಿದರು. ಪ್ರತಿಪಕ್ಷಗಳ ಪ್ರತಿಭಟನೆ, ಗದ್ದಲದ ನಡುವೆ ನಡೆದ ಪ್ರಶ್ನೋತ್ತರ ಕಲಾಪದಲ್ಲಿ ಆಡಳಿತ ಪಕ್ಷದ ಶಾಸಕ ಅಬ್ಬಯ್ಯ ಪ್ರಸಾದ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, 46,136 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಉಳಿದ ಸೀಟುಗಳು ಖಾಲಿ ಉಳಿದಿವೆ ಎಂದರು. ಕಾಗವಾಡ, ಮಾಗಡಿ ಹಾಗೂ ಟಿ. ನರಸೀಪುರದಲ್ಲಿ ಪಾಲಿಟೆಕ್ನಿಕ್ ಕಾಲೇಜು ಕಟ್ಟಡಗಳ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಕಾಮಗಾರಿ ಪೂರ್ಣಗೊಂಡ ನಂತರ ಆ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು. ತಾಂತ್ರಿಕ ಶಿಕ್ಷಣ ಇಲಾಖೆಯಡಿ 9 ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜುಗಳು ಹಾಗೂ ಒಂದು ಅನುದಾನಿತ ಮಹಿಳಾ ಪಾಲಿಟೆಕ್ನಿಕ್ ಕಾಲೇಜು ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು.

ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಶೇ.30ರಷ್ಟು ಪ್ರವೇಶಾತಿಯನ್ನು ವಿದ್ಯಾರ್ಥಿನಿಯರಿಗೆ ಮೀಸಲಿಡಲಾಗಿದೆ. ಹುಬ್ಬಳ್ಳಿಯಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯು ನಾಲ್ಕು ಕೋರ್ಸ್‌ಗಳು ಹಾಗೂ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಸಂಸ್ಥೆಯು ಆರು ಕೋರ್ಸ್‌ಗಳೊಂದಿಗೆ ಕಾರ್ಯನಿರ್ವಹಿಸುತ್ತಿವೆ ಎಂದರು. 2025-26ನೇ ಸಾಲಿನಲ್ಲಿ 109 ಸರ್ಕಾರಿ, 43 ಅನುದಾನಿತ ಹಾಗೂ 135 ಖಾಸಗಿ ಪಾಲಿಟೆಕ್ನಿಕ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ ಎಂದು ಸಚಿವರು ಹೇಳಿದರು.

## ಸದ್ಭಾವನಾ ದಿನ ಆಚರಣೆ

ಜನಶ್ರೀ ಟೈಮ್ಸ್ ಸುದ್ದಿ
ಗದಗ: ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಸದ್ಭಾವನಾ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.



ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ್ ಅವರು" ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯನಿರ್ವಹಿಸುತ್ತೇವೆ " ಎಂಬ ಸದ್ಭಾವನಾ ದಿನಾಚರಣೆಯ ಪ್ರತಿಜ್ಞಾ ವಿಧಿ ಬೋಧಿಸಿದರು. ವಿವಿಧತೆಯಲ್ಲಿ ಏಕತೆಯನ್ನು ಹೊಂದಿರುವ ಭಾರತದಲ್ಲಿ ಎಲ್ಲ ಸಮುದಾಯಗಳ ನಡುವೆ ಪರಸ್ಪರ ಗೌರವ ಮತ್ತು ವಿಶ್ವಾಸವನ್ನು ಬೆಳೆಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ. ಆರ್, ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಅಧಿಕಾರಿ ಶರಣು ಗೋಗೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

## ವಿಶ್ವ ಜಾನಪದ ದಿನಾಚರಣೆ ಅಂಗವಾಗಿ ಪಂಚಂ ಪಂಗಡಂ ಜಾನಪದ ಆಟ-ನೃತ್ಯಗಳ ಸಂಭ್ರಮಾಚರಣೆ

ಜನಶ್ರೀ ಟೈಮ್ಸ್ ಸುದ್ದಿ
ಗದಗ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ , ಬೆಂಗಳೂರು , ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು, ದಕ್ಷಿಣ ವಲಯ ಸಾಂಸ್ಕೃತಿ-ಕ ಕೇಂದ್ರ, ತಂಜಾವೂರು, ಎ.ಎಸ್.ಎಸ್.ವಾಣಿಜ್ಯ ಮಹಾವಿದ್ಯಾಲಯ, ಗದಗ ಸಹಯೋಗದಲ್ಲಿ ವಿಶ್ವ ಜಾನಪದ ದಿನಾಚರಣೆ ಅಂಗವಾಗಿ ಪಂಚಂ .. ಪಗಡಂ? ಜಾನಪದ ಆಟ-ನೃತ್ಯಗಳ ಸಂಭ್ರಮಾಚರಣೆ ಕಾರ್ಯಕ್ರಮವು ಅಗಸ್ಟ್ 22 ರಂದು ಬೆಳಿಗ್ಗೆ 10 ಗಂಟೆಗೆ ಗದಗ ಬೆಟಗೇರಿಯ ಎ.ಎಸ್.ಎಸ್.ಕಾಮರ್ಸ ಕಾಲೇಜು ಇಲ್ಲಿ ಜರುಗಲಿದೆ.

ವಿಧಾನಸಭೆ ಸಭಾಧ್ಯಕ್ಷರಾದ ಜಿ.ಎಸ್.ಪಾಟೀಲ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಬಸವರಾಜ ರಾಯರೆಡ್ಡಿ ಕಾರ್ಯಕ್ರಮವನ್ನು ಉದ್ಘಾಟಿಸುವರು. ಗದಗ ಶಾಸಕ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ ಜಾನಪದ ಮೆರವಣಿಗೆಯನ್ನು ಉದ್ಘಾಟಿಸುವರು. ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷ ಡಾ.ಗೊಲ್ಲಹಳ್ಳಿ ಶಿವಪ್ರಸಾದ್ ಪ್ರಾಸ್ತಾವಿಕ ನುಡಿಗಳನ್ನಾಡುವರು. ಆದರ್ಶ ಶಿಕ್ಷಣ ಸಮಿತಿ ಅಧ್ಯಕ್ಷ ಆನಂದ ಪೋತ್ನೀಸ್ ಜಾನಪದ ಆಟಗಳ ಉದ್ಘಾಟನೆ ಮಾಡುವರು. ಸಾಹಿತಿ ಡಾ.ನಿಂಗು ಸೊಲಗಿ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ, ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಡಾ.ಅರ್ಜುನ ಗೊಳಸಂಗಿ, ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಸದಸ್ಯೆ ಶ್ರೀಮತಿ ಸಾವಿತ್ರಿ ಬಾಯಿ ಲಮಾಣಿ, ಗದಗ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ವಿ.ಟಿ.ನಾಯ್ಕರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ, ಗದಗ ಜಿಲ್ಲಾ ಕನ್ನಡ ಅಧ್ಯಾಪಕರ ಸಂಘದ ಅಧ್ಯಕ್ಷ ಪ್ರೊ. ಶಿವಾನಂದ ಕೊರವರ ಆಗಮಿಸುವರು. ಸನ್ಮಾನಿತ ಕಲಾವಿದರು: ಯಲ್ಲಪ್ಪ ಡಕ್ಕಣ್ಣವರ, ಬಸವರಾಜ ಜಕ್ಕಮ್ಮನವರ, ಯಲ್ಲಪ್ಪ ಚಂದಣ್ಣವರ, ಸಂಕಪ್ಪ ಹುಲ್ಲೂರ, ಶ್ರೀಮತಿ ದುರಗಮ್ಮ ಮಾದರ, ನಿಂಗಪ್ಪ ಗುಡ್ಡದ, ಈರಣ್ಣ ಕಬ್ಬಿಣದ , ಪ್ರಕಾಶ ಕುರುಬರ ಈ ಕಲಾವಿದರುಗಳನ್ನು ಸನ್ಮಾನಿಸಲಾಗುವುದು. ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಡಾ.ಗೊಲ್ಲಹಳ್ಳಿ ಶಿವಪ್ರಸಾದ್ , ಸದಸ್ಯ ಸಂಚಾಲಕರಾದ ಶಂಕ್ರಣ್ಣ ಸಂಕಣ್ಣವರ, ರಿಜಿಸ್ಟ್ರಾರ್ ಶ್ರೀಮತಿ ನಮ್ರತಾ ಎನ್. ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ಉರ್ದು ಶಿಕ್ಷಕರ ನೇಮಕಾತಿಗೆ ತಕ್ಷಣ ಪೂರಕ ಆದೇಶ ಹೊರಡಿಸಲು ಸರ್ಕಾರಕ್ಕೆ ಪಟೇಲ್ ಮನವಿ

ಜನಶ್ರೀ ಟೈಮ್ಸ್ ಸುದ್ದಿ
ಕೊಪ್ಪಳ: ರಾಜ್ಯ ಸರ್ಕಾರವು ಇತ್ತೀಚೆಗೆ ಹೊರಡಿಸಿರುವ ಶಿಕ್ಷಕರ ನೇಮಕಾತಿ ಆದೇಶದಲ್ಲಿ ಉರ್ದು ಮಾಧ್ಯಮ ಶಾಲಾ ಶಿಕ್ಷಕರ ಹುದ್ದೆಗಳನ್ನು ಕಡೆಗಣಿಸಲಾಗಿದ್ದು, ತಕ್ಷಣವೇ ಪೂರಕ ಆದೇಶ ಹೊರಡಿಸಿ ಉರ್ದು ಶಿಕ್ಷಕರ ನೇಮಕಾತಿಯನ್ನು ಕೈಗೊಳ್ಳಬೇಕು ಎಂದು ಅಲ್ಪಸಂಖ್ಯಾತ ಸಮುದಾಯದ ಹಿರಿಯ ಮುಖಂಡ ಹಾಗೂ ಕೊಪ್ಪಳ ನಗರಸಭೆಯ ಮಾಜಿ ಅಧ್ಯಕ್ಷ ಅಮ್ಜದ್ ಪಟೇಲ್ ರವರು ಪ್ರಕಟಣೆ ಮೂಲಕ ಸರ್ಕಾರಕ್ಕೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಅವ-



ರಿಗೆ ಮನವಿ ಮಾಡಿಕೊಂಡು ಒತ್ತಾಯಪಡಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿದ ಅವರು ಸರ್ಕಾರ 15,000 ಶಿಕ್ಷಕರ ನೇಮಕಾತಿಗೆ ಮುಂದಾಗಿರುವುದು ಪ್ರಗತಿಪರ ಹೆಜ್ಜೆಯಾಗಿದ್ದರೂ ಕೂಡಉರ್ದು ಮಾಧ್ಯಮದ ಶಿಕ್ಷಕರ ಹುದ್ದೆಗಳನ್ನು ಸಂಪೂರ್ಣವಾಗಿ ಹೊರಗಿಟ್ಟಿರುವುದು ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯದ ವಿದ್ಯಾರ್ಥಿಗಳಿಗೆ ಎಸಗಿದ ಶೈಕ್ಷಣಿಕ ಅನ್ಯಾಯವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಭಾರತೀಯ ಸಂವಿಧಾನದ ವಿಧಿ 21 ಎ (ಶಿಕ್ಷಣದ ಹಕ್ಕು) ಹಾಗೂ ವಿಧಿ 350 ಎ, ಪ್ರಕಾರ ಅಲ್ಪಸಂಖ್ಯಾತ ಮುಸ್ಲಿಂ ಮಕ್ಕಳಿಗೆ ಮಾತೃಭಾಷೆಯಲ್ಲೇ ಪ್ರಾಥಮಿಕ ಶಿಕ್ಷಣ ನೀಡುವುದು ಸರ್ಕಾರದ ಕರ್ತವ್ಯ. ಉರ್ದು ಶಿಕ್ಷಕರ ನೇಮಕಾತಿ ತಡೆಯುವುದು ಈ ಸಂವಿಧಾನಾತ್ಮಕ ಹಕ್ಕಿನ ಉಲ್ಲಂಘನೆಯಾಗುತ್ತದೆ ಎಂಬುದು ನನ್ನ ಕಳಕಳಿಯ ಅಭಿಪ್ರಾಯವಾಗಿದೆ, ರಾಜ್ಯದ ನೂರಾರು ಉರ್ದು ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದಾಗಿ ಬಡ ಮತ್ತು ಹಿಂದುಳಿದ ವರ್ಗಗಳ ಮಕ್ಕಳ ಶಿಕ್ಷಣದ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ. ಶಿಕ್ಷಕ-ರಿಲ್ಲದೆ ಹಲವು ಶಾಲೆಗಳು ಮುಚ್ಚುವ ಹಂತ ತಲುಪಿವೆ. ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ರಾಜ್ಯದ ಅಭಿವೃದ್ಧಿಗೆ ಶ್ರಮಿಸಿದ ಸಮುದಾಯಕ್ಕೆ ಶೈಕ್ಷಣಿಕ ಕ್ಷೇತ್ರದಲ್ಲಿ ಸಮಾನ ಅವಕಾಶ ಒದಗಿಸುವುದು ಸಾಮಾಜಿಕ ನ್ಯಾಯದ ಹಕ್ಕಾಗಿದೆ. ಆದ್ದರಿಂದ ಸರ್ಕಾರ ಹಾಗೂ ವಿಶೇಷವಾಗಿ ಸರ್ಕಾರದ ಶಿಕ್ಷಣ ಸಚಿವರು ಈ ವಿಷಯವನ್ನು ಆಡಳಿತಾತ್ಮಕವಾಗಿ ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಪ್ರಸ್ತುತ ನೇಮಕಾತಿ ಪ್ರಕ್ರಿಯೆಯಲ್ಲೇ ಉರ್ದು ಮಾಧ್ಯಮದ ಶಿಕ್ಷಕರ ಹುದ್ದೆಗಳನ್ನು ಸೇರ್ಪಡೆಗೊಳಿಸಿ ತಕ್ಷಣ ವಿಶೇಷ ಅಧಿಸೂಚನೆ ಹೊರಡಿಸಬೇಕು ಹಾಗೂ ಉರ್ದು ಮಾಧ್ಯಮ ಶಾಲೆಗಳ ಉಳಿವು ಮತ್ತು ವಿದ್ಯಾರ್ಥಿಗಳ ಭವಿಷ್ಯವನ್ನು ರಕ್ಷಿಸಬೇಕು ಎಂದು ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಹಾಗೂ ಶಿಕ್ಷಣ ಸಚಿವ ಮಧು ಬಂಗಾರಪ್ಪ ನವ-ರಿಗೆ ಕೊಪ್ಪಳ ನಗರಸಭೆಯ ಮಾಜಿ ಅಧ್ಯಕ್ಷ ಹಾಗೂ ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯದ ಹಿರಿಯ ಮುಖಂಡ ಅಮ್ಜದ್ ಪಟೇಲ್ ರವರು ಕಳಕಳಿಯ ಮನವಿ ಮಾಡಿಕೊಂಡು ಒತ್ತಾಯಪಡಿಸಿದ್ದಾರೆ.

## ಅಡವಿ ಸೋಮಾಪುರದಲ್ಲಿ ವಿಶ್ವ ಸೊಳ್ಳೆ ದಿನಾಚರಣೆ ಸೊಳ್ಳೆಗಳ ನಿಯಂತ್ರಣ ಸಮುದಾಯದ ಮಾತಾಗಲಿ : ಡಾ.ಖೋನಾ

ಜನಶ್ರೀ ಟೈಮ್ಸ್ ಸುದ್ದಿ
ಗದಗ: ಮಲೇರಿಯಾ ಡೆಂಗ್ಯೂ ಚಿಕನ್ ಗುನ್ಯಾ ಆನೆಕಾಲು ರೋಗ ಮುಂತಾದ ರೋಗಗಳ ಹರಡುವಿಕೆಗೆ ಕಾರಣವಾದ ಸೊಳ್ಳೆಗಳ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು ಇವುಗಳ ನಿಯಂತ್ರಣ ಸಮುದಾಯದ ಮಾತಾಗಲಿ ಎಂದು ತಾಲೂಕ ಆರೋಗ್ಯ ಅಧಿಕಾರಿಗಳಾದ ಡಾ .ಪ್ರೀತ್ ಖೋನಾ ನಾ ಅವರು ಹೇಳಿದರು.




ತಾಲೂಕ ಆರೋಗ್ಯ ಅಧಿಕಾ-ರಿಗಳ ಕಾರ್ಯಾಲಯವು ಪ್ರಾಥಮಿಕ ಆರೋಗ್ಯ ಕೇಂದ್ರ ಲಕ್ಕುಂಡಿ, ಆಯುಷ್ಮಾನ್ ಆರೋಗ್ಯ ಕೇಂದ್ರ ಅಡವಿ ಸೋಮಾಪುರ ಇವುಗಳ ಸಂಯುಕ್ತ ಆಶ್ರಯದಲ್ಲಿ ಅಡವಿಸೋಮಾಪುರದ ಆಯುಷ್ಮಾನ್ ಆರೋಗ್ಯ ಮಂದಿರದಲ್ಲಿ ಏರ್ಪಡಿಸಿದ್ದ ತಾಲೂಕ ಮಟ್ಟದ ವಿಶ್ವ ಸೊಳ್ಳೆ ದಿನಾಚರಣೆ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮೇಲಿನಂತೆ ಮಾತನಾಡಿದ ಡಾ.ಖೋನಾ ಅವರು, ಸೊಳ್ಳೆಗಳ ನಿಯಂತ್ರಣ ನಿಮ್ಮಿಂದ ನಿಮಗಾಗಿ ನಿಮ್ಮ ಮನೆಯ ಬಾಗಿಲಲ್ಲಿ ಎಂಬುದನ್ನು ಯಾರೂ ಮರೆಯಬಾರದು ಎಂದರು.

ಗದಗ ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಡಾ. ರಾಜೇಂದ್ರ ಎಸ್ ಗಡಾದ ಅವರು ವಿಶ್ವ ಸೊಳ್ಳೆ ದಿನಾಚರಣೆ ಕುರಿತು ಉಪನ್ಯಾಸ ನೀಡಿ, ಸೊಳ್ಳೆಗಳು ದೇಹದ ಗಾತ್ರದಲ್ಲಿ ಬಹಳ ಚಿಕ್ಕದಾಗಿದ್ದರು ಮನುಕುಲದ ಬಹುದೊಡ್ಡ ವೈರಿಗಳಾಗಿವೆ.1902 ರಲ್ಲಿ ವೈದ್ಯ ವಿಜ್ಞಾನಕ್ಕಾಗಿ ನೊಬೆಲ್ ಪ್ರಶಸ್ತಿ ಪಡೆದ ಭಾರತೀಯ ಸಂಜಾತ ಬ್ರಿಟಿಷ್ ವೈದ್ಯ ಸರ್,ರೋನಾಲ್ಡ ರೋಸ್ ಅವರನ್ನು ಸ್ಮ-ರಿಸುವ ಸುದಿನ ಇದಾಗಿದ್ದು 1987 ನೇ ಆಗಸ್ಟ್ 20ರಂದು ಅವರು ಮಾಡಿದ ಸಂಶೋಧನೆಗಳ ಮೂಲಕ ಸೊಳ್ಳೆಗಳಿಂದ ಮನುಷ್ಯನಿಗೆ ಮಲೇ-ರಿಯ ಹರಡುತ್ತದೆ ಎಂದು ರೋಸ್ ಜಗತ್ತಿಗೆ ಸಾರಿ ಹೇಳಿದ ಸುದಿನ ಅಗಸ್ಟ್ 20 ಆಗಿದ್ದು, ಆ ಮಹಾನ್ ವ್ಯಕ್ತಿಯ ಸ್ಮರಣೆ ಗೋಸ್ಕರ ಹಾಗೂ ಸೊಳ್ಳೆಗಳಿಂದ ಹರಡುವ ರೋಗಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ವಿಶ್ವಾದ್ಯಂತ ಅಗಸ್ಟ್ 20ರಂದು ವಿಶ್ವ ಸೊಳ್ಳೆಗಳ ದಿನ ಆಚ-ರಿಸಲಾಗುತ್ತಿದೆ. ಜಗತ್ತಿನಾದ್ಯಂತ ಮಿಲಿಯನ್ ಗಟ್ಟಲೆ ಜನರ ಸಾವಿಗೆ ಕಾರಣವಾದ ರೋಗಗಳಿಗೆ ನಾಂದಿ ಹಾಡುವ ಸೊಳ್ಳೆಗಳ ನಿಯಂತ್ರಣಕ್ಕೆ ನಾವೆಲ್ಲ ಟೊಂಕ ಕಟ್ಟೋಣ ಎಂದು ಹೇಳಿ, ವಿವಿಧ ಸೊಳ್ಳೆಗಳಿಂದ ಹರಡುವ ರೋಗಗಳ ವಿವರಿಸಿ ಸೊಳ್ಳೆ ಮುಕ್ತ ಸಮಾಜ ಆರೋಗ್ಯವಂತ ಸಮಾಜ ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಯಲ್ಲಪ್ಪ ಹಕ್ಕಿ ಅವರು ಸೊಳ್ಳೆಗಳಿಂದ ಹರಡುವ ರೋಗಗಳ ಮುಖ್ಯ ಲಕ್ಷಣಗಳನ್ನು ಹಾಗೂ ಆರೋಗ್ಯಗಳ ನಿಯಂತ್ರಣವನ್ನು ಕುರಿತು ಮಾತನಾಡಿ ಸೊಳ್ಳೆಗಳ ಉತ್ಪತ್ತಿ ಪರೀಕ್ಷಿಸುವ ವಿಧಾನವನ್ನು ವಿವರಿಸಿದರು. ಲಕ್ಕುಂಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದಪ್ಪ ಲಿಂಗದಾಳ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿ ವಿಶ್ವ ಸೊಳ್ಳೆ ದಿನಾಚರಣೆಯ ಉದ್ದೇಶ ಮತ್ತು ಸೊಳ್ಳೆ ನಿಯಂತ್ರಣಕ್ಕೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಮಾತನಾಡಿದರು. ವೇದಿಕೆ ಮೇಲೆ ಹಿರಿಯ ಆರೋಗ್ಯ ನಿರೀಕ್ಷನಾಧಿಕಾರಿ ವಾಯ್. ಎನ್ ಕಡೆಮನಿ, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಶ್ರೀಮತಿ ಟಿ ಎಸ್ ರಾಯಬಾಗಿ ,ಶ್ರೀಮತಿ ಸವಿತಾ ಪವಾರ ಆಸೀನರಾಗಿದ್ದರು. ಆರಂಭದಲ್ಲಿ ಆಶಾ ಕಾರ್ಯಕರ್ತೆ ಮಾಲಾ ಪ್ರಾರ್ಥಿಸಿದರು. ಆರೋಗ್ಯ ನಿರೀಕ್ಷನಾಧಿಕಾರಿ ಮುತ್ತಪ್ಪ ಹಟ್ಟಿಮನಿ ಸರ್ವರನ್ನು ಸ್ವಾಗತಿಸಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದಪ್ಪ ಲಿಂಗದಾಳ ಕಾರ್ಯಕ್ರಮ ನಿರೂಪಿಸಿದರು. ಇನ್ನೋರ್ವ ಆರೋಗ್ಯ ನಿರೀಕ್ಷಾಧಿಕಾರಿ ಎಸ್ ಬಿ ಗಡಾದ್ ವಂದಿಸಿದರು.

ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಗರ್ಭಿಣಿ ತಾಯಂದಿರು ಸಾರ್ವಜನಿಕರು ಸೇರಿದಂತೆ ಆಶಾ ಕಾರ್ಯಕರ್ತೆಯರು ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

## ಸದ್ಭಾವನಾ ದಿನ : ಜಿಲ್ಲಾಡಳಿತದ ಭವನದಲ್ಲಿ ಪ್ರತಿಜ್ಞಾ ವಿಧಿ ಸ್ವೀಕಾರ



ಜನಶ್ರೀ ಟೈಮ್ಸ್ ಸುದ್ದಿ
ಕೊಪ್ಪಳ: ಸದ್ಭಾವನಾ ದಿನದ ಅಂಗವಾಗಿ ಜಿಲ್ಲಾಡಳಿತ ಭವನದದಲ್ಲಿ ಗುರುವಾರ ಪ್ರತಿಜ್ಞಾ ವಿಧಿ ಸ್ವೀಕಾರ ಕಾರ್ಯಕ್ರಮ ನಡೆಯಿತು.

ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಪ್ರತಿಜ್ಞೆ ಬೋಧಿಸಿದರು. ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳು ಹಾಗೂ ಜಿಲ್ಲಾಧಿಕಾರಿ ಕಛೇರಿಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದು, "ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧ ಭಾವವಿಲ್ಲದೇ ಭಾರತದ ಎಲ್ಲಾ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲಾ ಬೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಪ್ರತಿಜ್ಞೆ ಮಾಡುತ್ತೇನೆ" ಎಂಬ ಪ್ರತಿಜ್ಞೆಯನ್ನು ಸ್ವೀಕರಿಸಿದರು.


**ಜನಶ್ರೀ ಟೈಮ್ಸ್**
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.


**ಶ್ರೀ ದ್ಯಾಮವ್ವ ಮತ್ತು ದುರುಗಮ್ಮದೇವಿಯರ ಹರಿಜಾತ್ರೋತ್ಸವ ಎರಡನೇದಿನದ ಕಾರ್ಯಕ್ರಮ**

## ನಮ್ಮ ಆಚಾರಣೆಗಳು ಸಹ ವಿಜ್ಞಾನವೇ ಆಗಿವೆ : ಡಾ. ರಾಚೋಟೇಶ್ವರ ಸ್ವಾಮೀಜಿ

ಜನಶ್ರೀ ಟೈಮ್ಸ್ ಸುದ್ದಿ
ಗದಗ: ಭಾರತದಲ್ಲಿ ಪರಂಪರಾಗತವಾಗಿ ಆಚ-ರಿಸಿಕೊಂಡುಬರುತ್ತಿರುವ ಪ್ರತಿಯೊಂದುಆಚರಣೆಗಳಿಗೆ ತನ್ನದೇ ಆದ ವಿಶಿಷ್ಟಕಾರಣಗಳಿವೆ. ಇವು ಸಹಜವಾಗಿವೈಜ್ಞಾನಿಕವೂ ಆಗಿದ್ದು, ಜನರಜೀವನದಲ್ಲಿ ಹಾಸು ಹೊಕ್ಕಾಗಿವೆ. ನಮ್ಮವೇದ, ಜ್ಞಾನದ ಆಚ-ರಣೆಗಳುವಿಜ್ಞಾನವೇ ಆಗಿದ್ದು, ಅವು ಮಾನವನಿರ್ಮಿತ ವಿಜ್ಞಾನಕ್ಕೆ ಸವಾಲುಗಳಲ್ಲ. ವಿಜ್ಞಾನದೊಂದಿಗೆ ಹೊಂದಿಕೊಳ್ಳುವುದೇಆಧ್ಯಾತ್ಮವಾಗಿದೆ ಎಂದು ಅಂತೂರ-ಬೆಂತೂರ ಬೂದೀಶ್ವರ ಸಂಸ್ಥಾನಮಠದ ಪೂಜ್ಯಶ್ರೀ ಡಾ.ರಾಚೋಟೇಶ್ವರ ಶಿವಾಚಾರ್ಯಮಹಾಸ್ವಾಮಿಗಳು ನುಡಿದರು.



ಅವರು ನಗರದ ಒಕ್ಕಲಗೇರಿ ಓಣಿಯದ್ಯಾಮವ್ವನ ಕಟ್ಟೆಯ ದೇವಸ್ಥಾನದಆವರಣದಲ್ಲಿ ಪ್ರತಿ 12 ವರ್ಷಕ್ಕೊಮ್ಮೆಜರುಗುವ ಶ್ರೀ ದ್ಯಾಮವ್ವ ಮತ್ತುದುರುಗಮ್ಮ ದೇವಿಯರ ಹರಿಜಾತ್ರೋತ್ಸವದ ಎರಡನೇ ದಿನದಸಭಾ ಕಾರ್ಯಕ್ರಮದ ಸಾನಿಧ್ಯ ವಹಿಸಿಅವರು ಮಾತನಾಡಿ, ವಿಜ್ಞಾನವುವಸ್ತುಗಳ ಮೇಲೆ ಪ್ರಯೋಗನಡೆಸಿದರೆ ಆಧ್ಯಾತ್ಮವು ಸ್ವಯಂ ಅನುಭವ, ಜ್ಞಾನ ಹಾಗೂ ತಪಸ್ಸಿನಿಂದತನ್ನ ಸಾಕ್ಷ್ಯ ನೀಡುವುದು. ಇದರ ಅರ್ಥ ಇದು ವಿಜ್ಞಾನಕ್ಕೆ ಸವಾಲು ಅಲ್ಲ. ಪ್ರತ್ಯೇಕ ಅನುಭವ ಹಾಗೂ ಅನುಭೂತಿ ಎಂದು ಅವರು ಹೇಳಿದರು. 12 ವರ್ಷಗಳಿಗೊಮ್ಮೆ ಕುಂಭಮೇಳ, 12 ವರ್ಷಗಳಿಗೊಮ್ಮೆ ಜಾತ್ರೆ ನಡೆಯುವುದರ ಹಿಂದೆ ತನ್ನದೇ ಆದ ಪ್ರಬಲ ವೈಜ್ಞಾನಿಕ ಕಾರಣಗಳಿವೆ. ಈಜಾತ್ರೆಯ ಸಂದರ್ಭದಲ್ಲಿ ಬಳಸುವವಸ್ತುಗಳು ವಿತರಿಸುವ ಪ್ರಸಾದವಿಜ್ಞಾನಕ್ಕೆ ಸವಾಲಲ್ಲ, ಬದಲಾಗಿ ಸ್ವಯಂಅನುಭೂತಿಯ ಸಂಕೇತವಾಗಿದ್ದುಆಧ್ಯಾತ್ಮ ಜೀವಿಗಳು ಎಂದಿಗೂ ಸವಾಲು ಹಾಕುವುದಿಲ್ಲ. ಅವರು ಸ್ವಯಂನಿರ್ಮಾತೃ. ತುಳಸಿ ಎಲೆ, ಬಿಲ್ವ ಪತ್ರ,ಬೇವಿನಮರದ ಬಳಕೆಯಿಂದಾಗುವಪ್ರಯೋಜನಗಳು ವಿಜ್ಞಾನವಲ್ಲವೇ ಎಂದು ಪ್ರಶ್ನೆ ಮಾಡಿದ ಶ್ರೀಗಳು ವಾತಾವರಣದಲ್ಲಾಗುವ ಬದಲಾವಣೆಮುನ್ಸೂಚನೆ ಮುಂತಾದವುಗಳನ್ನುಭಾರತದ ಭವ್ಯ ಪರಂಪರೆ ಮೊದಲೇಕಂಡು ಹಿಡಿದಿದೆ ಎಂದರು ಇಡಿ ಜಗತ್ತಿಗೆ ವೇದ ಜ್ಞಾನ ನೀಡಿದಭಾರತ, ಜ್ಞಾನದ ಗಂಗೆ ಹ ರಿಸಿದೆ.ಆಚರಣೆಗಳಿಗೆ, ನಂಬಿಕೆಗಳಿಗೆವೈಜ್ಞಾನಿಕ ಸ್ಪರ್ಷ ನೀಡಿದೆ. ಜ್ಞಾನಕ್ಕೆಸಮಾನವಾದದ್ದು ಯಾವುದೂ ಇಲ್ಲ. ನಮ್ಮ ಆಚಾರಣೆಗಳು ಸಹ ವಿಜ್ಞಾನವೇಆಗಿದ್ದು, ಪ್ರೀತಿ, ವಿಶ್ವಾಸ, ನಂಬಿಕೆ ಶುದ್ಧಮನಸ್ಸಿದ್ದವರಿಗೆ ಜಗನ್ಮಾತೆ ಎಂದೂಕೈಬಿಡುವುದಿಲ್ಲ. ವಿಜ್ಞಾನ, ತಂತ್ರಜ್ಞಾನ,ಆಧ್ಯಾತ್ಮ ಇವುಗಳ ಅನುಭವದಲ್ಲಿವ್ಯತ್ಯಾಸವಿದ್ದರೂ ಪರಿಣಾಮ ಮಾತ್ರಒಂದೇ. ಅದು ಜನಹಿತ ಆದರೂ ಸಹವಿಜ್ಞಾನ ನಂಬಿಕೆಗಳಿಗೆ ಒಪ್ಪಿಗೆಸೂಚಿಸುತ್ತಿಲ್ಲ.

ಜ್ಯೋತಿಷ್ಯಶಾಸ್ತ್ರ ನಮ್ಮ ಪರಂಪರೆ ಮರೆಯುತ್ತಿರುವುದು ಕಳವಳಕಾರಿ. ಸಂಸ್ಕಾರ ಅತ್ಯಂತಮುಖ್ಯ. ಯೋಗಿ, ಅಧ್ಯಾತ್ಮವಾದಿವಿಜ್ಞಾನಕ್ಕೆ ಸವಾಲು ಹಾಕುವವನಲ್ಲ, ಮೂರು ಕೋಟಿ ರೋಗಗಳಿಗೆ ವೇದದಲ್ಲಿ ಪರಿಹಾರವಿದೆ. ಜ್ಞಾನ, ಅಜ್ಞಾನ,ಜ್ಞಾನಿ, ಸುಜ್ಞಾನಿ ಯಾರೆಂಬುದುತಿಳಿಯದಾಗಿದೆ. ಅಧ್ಯಯನದ ಕೊರತೆಕಾಡುತ್ತಿದೆ. ಎಐ ಯುಗ ಎಂದು ನಾವುಬಣ್ಣಿಸಿಕೊಂಡರೂ ಎಐ ಸಹ ಮಾನವನಿರ್ಮಿತವೇ ಆಗಿದೆ. ಈ ಹಿನ್ನೆಲೆಯಲ್ಲಿ ನಮ್ಮಜಾತ್ರೆಗಳು ಸಮುದಾಯದಒಗ್ಗಟ್ಟಿಗೆ ಪರಸ್ಪರ ಪ್ರೀತಿಗೆ ನಾಂದಿಹಾಡುವಂತಾಗಲಿ, ಭಾರತೀಯ ಭವ್ಯಪರಂಪರೆ ಹಚ್ಚ ಹಸಿರಾಗಿರಲಿ ಎಂದುಶ್ರೀಗಳು ಆಶಿಸಿದರು. ಜಾತ್ರಾ ಕಮೀಟಿಯಕಾರ್ಯಾಧ್ಯಕ್ಷರಾದ ಫಕ್ಕೀರಪ್ಪ ಹೆಬಸೂರ ಮಾತನಾಡಿ, ದ್ಯಾಮವ್ವ,ದುರುಗಮ್ಮ ದೇವಿಯರ ಜಾತ್ರೆನಡೆದು ಬಂದ ದಾರಿ ವಿವರಿಸಿದರಲ್ಲದೇ,ಭವಿಷ್ಯದಲ್ಲಿ ಭವ್ಯವಾದ ಸಮುದಾಯಭವನವನ್ನು ನಿರ್ಮಿಸಲು ಎಲ್ಲರೂಸಹಕರಿಸಬೇಕು ಎಂದು ಹೇಳಿದರು. ಬಣಜಿಗ ಸಮಾಜದ ಜಿಲ್ಲಾಧ್ಯಕ್ಷ ಈಶಣ್ಣಮುನವಳ್ಳಿ ಅವರು ಮಾತನಾಡಿ, ದ್ಯಾಮವ್ವ ಮತ್ತು ದುರುಗಮ್ಮದೇವಿಯ ಹರಿ ಜಾತ್ರೋತ್ಸವ ಅತ್ಯಂತವೈಭವದಿಂದ ನಡೆಯುತ್ತಿದ್ದು ಇದಕ್ಕೆತಾಯಂದಿರ ಹಾಗೂ ಯುವಕರಪರಿಶ್ರಮ ಅಧಿಕವಾಗಿದೆ. ಮುಂಬರುವದಿನಮಾನಗಳಲ್ಲಿ ಯುವಕರುಜಾತ್ರೆಗೆ ಮತ್ತಷ್ಟು ಮೆರಗುಹೆಚ್ಚಿಸಬೇಕು ಈ ಜಾತ್ರೆಯ ಇತಿಹಾಸ ಕುರಿತು ಪುಸ್ತಕವನ್ನು ಪ್ರಕಟಿಸಿಮುಂದಿನ ಪೀಳಿಗೆಗೆ ತಿಳಿಸಬೇಕು ಎಂದು ಹೇಳಿದರು.

ನಗರಸಭೆ ಸದಸ್ಯರ ರಾಘವೇಂದ್ರ ಯಳವತ್ತಿ ಸಂದರ್ಭೋಚಿತವಾಗಿ ಮಾತನಾಡಿದರು. ವೇದಿಕೆಯ ಮೇಲೆ ಆದ್ಯಾತ್ಮಿಕ ವಿದ್ಯಾಶ್ರಮದ ಪೂಜ್ಯಶ್ರೀಶಿವಶರಣೆ ನೀಲಮ್ಮ ತಾಯಿ ಅಸುಂಡಿಅಮ್ಮನವರು, ಟ್ರಸ್ಟ ಕಮೀಟಿ ಅಧ್ಯಕ್ಷ ಕೊಟ್ರಪ್ಪ ಕಮತರ, ಡಾ. ಡಿ.ಬಿ.ಬಿಡಿನಹಾಳ, ಆರುಣಕುಮಾರ ಚವ್ಹಾಣ, ಆರ್.ಡಿ. ಕಡ್ಲಿಕೊಪ್ಪ ಉದ್ದಿಮೆದಾರ ಪ್ರಕಾಶ ಕರಿ, ನಗರಸಭಾ ಸದಸ್ಯರಾದ ಲಕ್ಷ್ಮವ್ವ ಭಜಂತ್ರಿ, ಪೂರ್ಣಿಮಾಭರದ್ವಾಡ ಅವರುಗಳು ಜಾತ್ರೆಯಕುರಿತು ಮತನಾಡಿದರು.

ಈ ಸಂದರ್ಭದಲ್ಲಿ ಶ್ರೀಮತಿ ಸುಜಾತಾ ಗುಗ್ಗರಿ, ಮರಿಗೌಡರ, ನರಸಪ್ಪ ತುಕ್ಕಪ್ಪನವರ, ಬಾಬಣ್ಣ ಜಕ್ಕಲಿ,ಮಂಜುಳಾ ನರೇಗಲ್ಲ, ಕುಮಾರವಿಭೂತಿಮಠ, ಸುವರ್ಣಾ ನಾಲ್ವಾಡ, ಶಿವಣ್ಣಗುತ್ತಿ, ಬಸವರಾಜ ಹಡಪದ, ಎಂ.ಎಂ.ಹಿರೇಮಠ, ವಿಜಯಕುಮಾರ ಗಡ್ಡಿ, ಪಾಪಣ್ಣ ಕರಮುಷ್ಠಿ ಮಂಜುನಾಥ ಚಂದಪ್ಪನವರ, ಬಸವರಾಜ ಚಂದಪ್ಪನವರ, ಎಸ್.ಕೆ. ತೆಗ್ಗಿನಮಠ, ಕಿರಣ ಮಾಸ್ತಿ ಸೇರಿದಂತೆ ಮುಂತಾದವರು ಉಪಸ್ಥಿತ-ರಿದ್ದರು. ಸುರೇಶ ಮರಳಪ್ಪನವರ ಸ್ವಾಗತಿಸಿದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು. ವಿರುಪಾಕ್ಷಪ್ಪ ಅಕ್ಕಿ ವಂದಿಸಿದರು.ನಂತರ ಕಾಮಿಡಿ ಕಿಲಾಡಿಯ ಸಂಜುಬಸಯ್ಯ ಹಾಗೂ ಗದುಗಿನ ನಟರಂಗಕಲಾ ಸಂಸ್ಥೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳುಜರುಗಿದವು.

ಮೂರು ದಶಕಗಳ ಪ್ರಾಮಾಣಿಕ ಸೇವೆ, ನಂಬಿಕೆ, ವಿಶ್ವಾಸವೇ ಬುನಾದಿ ಗಂಗಾಪುರಪೇಟೆಯ ಕೃಷಿ ಮನೆತನದ ಎಂ ಎಸ್ ಪಾಟೀಲ 30 ವರ್ಷಗಳ ನಂಬಿಕೆ ವಿಶ್ವಾಸದ ಪಯಣ!

## ಮೂರು ದಶಕಗಳ ಸೇವೆ. ಸಾವಿರಾರು ಗ್ರಾಹಕರ ವಿಶ್ವಾಸ! ಗದಗದ ಹಣಕಾಸು ಕ್ಷೇತ್ರದಲ್ಲಿ ಮುಂಚೂಣಿಗೆ ಬಂದ ಸಂಸ್ಥೆ! ಜನರ ನಂಬಿಕೆ ಸಂಸ್ಥೆಯ ಶಕ್ತಿ! 30 ವರ್ಷ ಬದಲಾಗದ ನಂಬಿಕೆ!

# ಶ್ರೀ ಸಿದ್ಧಲಿಂಗೇಶ್ವರ ಚಿಟ್ ಫಂಡ್ಸ್ ಪ್ರೈ ಲಿ 30ರ ಸಂಭ್ರಮ

ಗದಗ: ಗದಗ ಪರಿಸರದಲ್ಲಿ ಶ್ರೀ ಸಿದ್ಧಲಿಂಗೇಶ್ವರ ಚಿಟ್ ಫಂಡ್ಸ್ ಪ್ರವೇಟ್ ಲಿ ಕಳೆದ 30 ವರ್ಷಗಳಿಂದ ಜನರ ಪ್ರೀತಿ ವಿಶ್ವಾಸ ಗಳಿಸಿ ಮುನ್ನಡೆಯತ್ತಿದೆ. ಗ್ರಾಹಕರೇ ದೇವರೆಂಬ ನಂಬಿಕೆ ವಿಶ್ವಾಸದ ಮೂಲಕ ನೂರಾರು ಜನರ ಆಸೆಗಳನ್ನು ಈಡೇರಿಸಿದ ಹೆಮ್ಮೆ, ಸಂತೋಷ ಸಂಸ್ಥೆಗಿದೆ. ಗ್ರಾಹಕರ ಕನಸು ಆಸೆಗಳಿಗೆ ಆಸರೆಯಾಗಿ ನಿಂತು ಅವರ ಸಂಭ್ರಮದಲ್ಲಿ ಸಂತೃಪ್ತಿ ಸಮಾಧಾನಪಟ್ಟುಕೊಳ್ಳುವ ಸಂಸ್ಥೆ ಇದಾಗಿದೆ. ಕಳೆದ ಮೂರು ದಶಕಗಳ ವ್ಯವಹಾರದಲ್ಲಿ ಕಪ್ಪು ಚುಕ್ಕೆ ಇಲ್ಲದಂತೆ ವ್ಯವಹಾರ ನಡೆಸಿದ ಗದಗ ನಗರದ ಹಲವು ಸಂಸ್ಥೆಗಳ ಶ್ರೀ ಸಿದ್ಧಲಿಂಗೇಶ್ವರ ಚಿಟ್ ಫಂಡ್ಸ್ ಪ್ರವೇಟ್ ಲಿ ಒಂದಾಗಿದೆ.

ಧಾರ್ಮಿಕ ಕಾರ್ಯ, ಸಾಮಾಜಿಕ ಕಾರ್ಯದಲ್ಲಿ ಮುಂಚೂಣಿಯಲ್ಲಿರುವ ಶ್ರೀ ಎಂ ಎಸ್ ಪಾಟೀಲ ಅವರು ಶ್ರೀ ಸಿದ್ಧಲಿಂಗೇಶ್ವರ ಚಿಟ್ ಫಂಡ್ಸ್ ಪ್ರವೇಟ್ ಲಿ ರೂವಾರಿಗಳು. ಗದಗ ನಗರದಲ್ಲಿ ಗಂಗಾಪುರಪೇಟೆ ಗೌಡರೆಂದೇ ಜನಜನಿತರಾದ ಶ್ರೀ ಎಂ ಎಸ್ ಪಾಟೀಲ ಅವರದು ರೈತ ಕುಟುಂಬ, ಕೃಷಿಕ ಮನೆತನ. ಆದರೆ, 90ರ ದಶಕದಲ್ಲಿ ಇವರ ಸಹೋದರ ಚಿಕ್ಕದಾಗಿ ಚಿಟ್ ಫಂಡ್ ವ್ಯವಹಾರ ನಡೆಸುತ್ತಿದ್ದರು. ಆದರೆ, ವಿಧಿಯಾಟ ಹೃದಯಾಘಾತದಿಂದ ಸಹೋದರ ಆಕಸ್ಮಿಕವಾಗಿ ನಿಧನರಾದ ಮೇಲೆ ಆ ವೃತ್ತಿಯನ್ನು ಎಂ ಎಸ್ ಪಾಟೀಲ ಮುನ್ನಡೆಸತೊಡಗಿದರು. ಜನರಿಗೆ ಪ್ರಾಮಾಣಿಕ ಸೇವೆ ನೀಡಬೇಕು ಎಂಬ ಅಭಿಲಾಷೆಯಿಂದ ಎಂ ಎಸ್ ಪಾಟೀಲ ಅವರು ಚಿಟ್ ಫಂಡ್ಸ್ ಸಂಸ್ಥೆಯನ್ನು ಕಾನೂನುಬದ್ಧವಾಗಿ ನಡೆಸಬೇಕೆಂದು ತೀರ್ಮಾನಿಸಿದರು. ಚಿಟ್ ಫಂಡ್ ನೋಂದಣಿಗೂ ಹತ್ತಾರು ಸಮಸ್ಯೆಗಳು, ಪಡಿಪಾಟೀಲುಗಳು ಎದುರಾದರೂ ಕೈಕಟ್ಟಿ ಕೂಡಲಿಲ್ಲ, ವಿರಮಿಸಲೂ ಇಲ್ಲ. ಕೊನೆಗೆ ಹುಬ್ಬಳ್ಳಿಗೆ ತೆರಳಿ ಅಲ್ಲಿ ಹಿರಿಯ ಚಾರ್ಟೆಡ್ ಅಕೌಂಟೆಂಟ್ ಒಬ್ಬರನ್ನು ಭೇಟಿ ಮಾಡಿ ಕಾನೂನು ಸಲಹೆ ಪಡೆದು ಸಂಸ್ಥೆಯನ್ನು ನೋಂದಣಿ ಮಾಡಿಸಲಾಯಿತು. ಮನೆ ದೇವರಾದ ಸಂಗಮೇಶ್ವರನ ಹೆಸರಿಡಬೇಕೆಂಬ ಬಯಕೆ ಇತ್ತು. ಆದರೆ, ಅದು ಸಾಧ್ಯವಾಗಲಿಲ್ಲ. ಸಂಗಮ ಅಂತಾದರೂ ಹೆಸರಿಡಬೇಕು ಅಂದುಕೊಂಡರೂ ಆ ಹೆಸರು ಸಿಗಲಿಲ್ಲ. ಕೊನೆಯದಾಗಿ ಶ್ರೀ ಸಿದ್ಧಲಿಂಗೇಶ್ವರ ಚಿಟ್ ಫಂಡ್ಸ್ ಪ್ರೈ ಲಿ ಹೆಸರು ಅಂತಿಮಗೊಂಡಿತು.

ನಡೆದಾಡುವ ದೇವರೆಂದು ಕರೆಸಿಕೊಳ್ಳುವ ಶ್ರೀ ಪುಟ್ಟರಾಜ ಕವಿ ಗವಾಯಿಗಳು ಅಮೃತಹಸ್ತದಿಂದ 18-8-2026ರಂದು ಶ್ರೀ ಸಿದ್ಧಲಿಂಗೇಶ್ವರ ಚಿಟ್ ಫಂಡ್ಸ್ ಪ್ರೈವೇಟ್ ಲಿ ಉದಯಿಸಿತು. ಪುಟ್ಟರಾಜ ಗವಾಯಿಗಳ ಕೃಪಾಶೀರ್ವಾದ ಜತೆಗೆ ಸಂಸ್ಥೆ ಬೆಳೆಸುವ ಹಂಬಲ, ಪ್ರಾಮಾಣಿಕ ಸೇವೆಯಿಂದಾಗಿ ಎಂ ಎಸ್ ಪಾಟೀಲ ಅವರ ವ್ಯವಹಾರ ವರ್ಷದಿಂದ ವರ್ಷಕ್ಕೆ ವೃದ್ಧಿಸತೊಡಗಿತು. ಚಿಟ್ ಪಂಡ್ಸ್ ನಿಂದ ಅರ್ಹ ಗ್ರಾಹಕರ ಅಗತ್ಯತೆಗೆ ತಕ್ಕಂತೆ ಸಾಲ ನೀಡಲಾಯಿತು. ಕಾರು ಖರೀದಿ, ದ್ವಿಚಕ್ರ ವಾಹನ ಖರೀದಿ, ಆಸ್ತಿ ಖರೀದಿ, ವೇರ್ ಹೌಸ್ ನಿರ್ಮಾಣ ಹೀಗೆ ಜನರ ಅಗತ್ಯತೆಗೆ ಸಂಸ್ಥೆ ಸ್ಪಂದಿಸಿ ಸಹಕಾರ ನೀಡಿದ್ದರಿಂದ ಬಹುಬೇಗನೆ ಗದಗ ಬೆಟಗೇರಿ ಅವಳಿ ನಗರದ ಜನರ ಮನದಲ್ಲಿ ನೆಲೆಯೂರಿತು. ಪರಿಣಾಮವಾಗಿ ಸಂಸ್ಥೆ ಲಕ್ಷಾಂತರ ರೂಪಾಯಿ ವ್ಯವಹಾರ ನಡೆಸುವಂತಾಯಿತು. ಇದೀಗ ಸಂಸ್ಥೆಯಲ್ಲಿ 15-20 ಗ್ರುಪ್ ಗಳು ಕಾರ್ಯನಿರ್ವಹಿಸುತ್ತಿದೆ. ಸಂಸ್ಥೆಯನ್ನು ಇನ್ನಷ್ಟು ಮತ್ತಷ್ಟು ಬೆಳೆಸಬೇಕು ಎಂಬ ಗುರಿ ಇಟ್ಟುಕೊಂಡು ಮುನ್ನಡೆಯಲಾಗುತ್ತಿದೆ ಎನ್ನುತ್ತಾರೆ ಶ್ರೀ ಸಿದ್ಧಲಿಂಗೇಶ್ವರ ಚಿಟ್ ಫಂಡ್ಸ್ ಪ್ರೈ ಲಿ ಕಾರ್ಯನಿರ್ವಾಹಕ ನಿರ್ದೇಶಕ ಶ್ರೀ ಎಂ ಎಸ್ ಪಾಟೀಲ ಅವರು. ಪ್ರತಿ ಐದು ವರ್ಷಕ್ಕೊಮ್ಮೆ ಅದ್ದೂರಿಯಾಗಿ ಕಾರ್ಯಕ್ರಮವನ್ನು ಆಯೋಜಿಸಿ ಸಂಸ್ಥೆಯ ಪಾರದರ್ಶಕ ವ್ಯವಹಾರದ ಬಗ್ಗೆ ಗ್ರಾಹಕರಿಗೆ ಮನವರಿಕೆ ಮಾಡಿಕೊಡುವುದನ್ನು ರೂಢಿಸಿಕೊಳ್ಳಲಾಗಿದೆ. 1996ರಲ್ಲಿ ಸಂಸ್ಥೆ ಆರಂಭಗೊಂಡಿತು. 2001, 2006, 2011, 2016ರಲ್ಲಿ ಕಾರ್ಯಕ್ರಮಗಳನ್ನು ಮಾಡಿ ಸಂಸ್ಥೆಯ ಕಾರ್ಯವೈಖರಿ, ನಂಬಿಕೆ, ಗ್ರಾಹಕರ ಸಮಾಧಾನ, ಸಂತೃಪ್ತಿಯನ್ನು ಜನರಿಗೆ ತಿಳಿಸಲಾಯಿತು. ಖಾಸಗಿ ಸಂಸ್ಥೆ ಸಂಸ್ಥೆಗಳು, ಸೊಸೈಟಿಗಳಲ್ಲಿ ಪ್ರತಿ ವರ್ಷ ಶೇ 12ರಷ್ಟು ಡಿವಿಡೆಂಡ್ ಕೊಡುವುದು ನಡೆದುಬಂದ ಸಂಪ್ರದಾಯ. ಆದರೆ ಶ್ರೀ ಸಿದ್ಧಲಿಂಗೇಶ್ವರ ಚಿಟ್ ಫಂಡ್ಸ್ ಪ್ರೈ ಲಿ ನಲ್ಲಿ ಆರಂಭ ಕೆಲ ವರ್ಷಗಳ ಕಾಲ ಸದಸ್ಯರಿಗೆ ಶೇ 20ರಷ್ಟು ಡಿವಿಡೆಂಡ್ ನೀಡಿದ ಉದಾಹರಣೆಯೂ ಇದೆ. ಆದರೆ, ಹಿರಿಯ ಧುರೀಣರೊಬ್ಬರ ನೀಡಿದ ಸಲಹೆಯಿಂದ ನಾವು ಸಹ ಶೇ 12ರಷ್ಟು ಡಿವಿಡೆಂಡ್ ಅನ್ನು ಪ್ರತಿವರ್ಷ ತಪ್ಪದೇ ನೀಡುತ್ತೇವೆ. ರಾಷ್ಟ್ರೀಕೃತ ಬ್ಯಾಂಕ್ ನಲ್ಲಿ ಸಿಗುವಂತ ಸೌಲಭ್ಯಗಳನ್ನು ನಾವು ಸಹ ನೀಡುತ್ತೇವೆ. 2021ರಲ್ಲಿ ಕರೋನಾ ಕಾರಣದಿಂದ ಕಾರ್ಯಕ್ರಮ ಮಾಡಲಿಲ್ಲ. 10 ವರ್ಷಗಳ ನಂತರ ಇದೀಗ ಆಗಸ್ಟ್ 18ರಂದು ಮತ್ತೊಂದು ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎನ್ನುತ್ತಾರೆ ಎಂ ಎಸ್ ಪಾಟೀಲ. ಇದಲ್ಲದೇ, ಎಂ ಎಸ್ ಪಾಟೀಲರು ತಮ್ಮ 8-10 ಸ್ನೇಹಿತರು ಸೇರಿಕೊಂಡು 2002ರಲ್ಲಿ ದುರ್ಗಾದೇವಿ ಕೋ ಆಪ್ ಸೊಸೈಟಿ ಅರಂಭಿಸಿದ್ದು. 5 ಲಕ್ಷ ರೂ. ಷೇರು ಬಂಡವಾಳದೊಂದಿಗೆ ಸೊಸೈಟಿ ಶುರುಮಾಡಿದ್ದಾರೆ.









ಮೂರು ದಶಕಗಳ ಕಾಲ ಚಿಟ್ ಫಂಡ್ ಸಂಸ್ಥೆ ನಡೆಸುವುದು ಸುಲಭವಲ್ಲ. ಪ್ರಾಮಾಣಿಕತೆ ಬೇಕು. ನಮ್ಮಲ್ಲಿ ಪ್ರಾಮಾಣಿಕತೆ ಇದ್ದರೆ ಪ್ರಾಮಾಣಿಕ ಗ್ರಾಹಕರೆ ನಮಗೆ ಸಿಗುತ್ತಾರೆ. ವ್ಯವಹಾರದಲ್ಲಿ ಪ್ರಾಮಾಣಿಕತೆ ಅಳವಡಿಸಿಕೊಂಡರೇ ದೇವರಿಗೂ ಅಂಜಬೇಕಿಲ್ಲ ಎಂಬ ಹಿರಿಯ ಸಹಕಾರ ಧುರೀಣರಾದ ದಿ. ಕೆ ಎಚ್ ಪಾಟೀಲರ ಮಾತನ್ನು ಚಾಚು ತಪ್ಪದೇ ಪಾಲಿಸುತ್ತಿದ್ದೇನೆ.

–ಎಂ ಎಸ್ ಪಾಟೀಲ,
ಕಾರ್ಯನಿರ್ವಾಹಕ ನಿರ್ದೇಶಕ, ಶ್ರೀ ಸಿದ್ಧಲಿಂಗೇಶ್ವರ ಚಿಟ್ ಫಂಡ್ಸ್ ಪ್ರೈ ಲಿ.











### ಬಿಕಾಂ ಪದವೀಧರರು

ಶ್ರೀ ಸಿದ್ಧಲಿಂಗೇಶ್ವರ ಚಿಟ್ ಫಂಡ್ಸ್ ಪ್ರೈ ಲಿ ಕಾರ್ಯನಿರ್ವಾಹಕ ನಿರ್ದೇಶಕ ಶ್ರೀ ಎಂ ಎಸ್ ಪಾಟೀಲ ಅವರು ಬಿಕಾಂ ಪದವೀಧರರಾಗಿದ್ದು, ಅವರಿಗೆ ಇಬ್ಬರು ಪುತ್ರರು, ಇಬ್ಬರು ಪುತ್ರಿಯರಿದ್ದು, ಗಂಡು ಮಕ್ಕಳು ಬಿಕಾಂ ವ್ಯಾಸಂಗ ಮಾಡುತ್ತಿದ್ದಾರೆ. ಇಬ್ಬರು ಪುತ್ರಿಯರು ಪೈಕಿ ಒಬ್ಬರು ಎಂಬಿಬಿಎಸ್ ಪೂರ್ಣಗೊಳಿಸಿ ಎಂಡಿ ವ್ಯಾಸಂಗ ಮಾಡುತ್ತಿದ್ದಾರೆ. ಮತ್ತೊಬ್ಬರು ಬಿಕಾಂ ಎಂಬಿಎ ಪದವೀಧರರಾಗಿದ್ದಾರೆ. ಎಂ ಎಸ್ ಪಾಟೀಲ ಅವರು ಎಲ್ ಎಲ್ ಬಿ ಪದವಿ ಪೂರ್ಣಗೊಳಿಸಲು ಸಾಧ್ಯವಾಗಲಿಲ್ಲ. ಹೀಗಾಗಿ ಒಬ್ಬ ಪುತ್ರನನ್ನು ವಕೀಲರನ್ನಾಗಿಸಬೇಕೆಂಬ ಆಸೆ ಇದೆ. ನಡೆ ನುಡಿಯಲ್ಲಿ ಏಕತೆ ಹೊಂದಿರುವ ಅತ್ಯಂತ ಸರಳ ಜೀವಿ. ಸಮಾಜದ ಬಗ್ಗೆ ವಿಶೇಷ ಕಾಳಜಿ ಹೊಂದಿರುವ ಗೌಡರು, ಬಡವರು, ಅಶಕ್ತರಿಗೆ ಮಿಡಿಯುವಂತಹ ವ್ಯಕ್ತಿತ್ವದವರಾಗಿದ್ದಾರೆ. ಪಾಟೀಲ ಅವರು ಗದಗ ತಾಲೂಕಿನ ಕಳಸಾಪುರದಲ್ಲಿ ಪೆಟ್ರೋಲ್ ಬಂಕ್ ಹೊಂದಿದ್ದು, ಅಲ್ಲಿಯೇ ಮೂರು ಎಕರೆ ಜಮೀನು ಸಹ ಇದೆ. ಜನರಿಗೆ ಅನುಕೂವಾಗಲಿ ಎಂಬ ಕಾರಣಕ್ಕೆ ಅಲ್ಲೊಂದು ಕಲ್ಯಾಣ ಮಂಟಪ ನಿರ್ಮಿಸುವ ಕನಸು ಇಟ್ಟುಕೊಂಡಿದ್ದಾರೆ. ಮುಂದಿನ ವರ್ಷ ಅದರ ಭೂಮಿಪೂಜೆ ನೆರವೇರಿಸಲು ನೀಲನಕ್ಷೆಯನ್ನೂ ತಯಾರಿಸಿದ್ದಾರೆ.

### ರಾಜಕೀಯ ಪ್ರವೇಶ

ಎಂ ಎಸ್ ಪಾಟೀಲರು ರಾಜಕೀಯ ಕ್ಷೇತ್ರದಲ್ಲೂ ಕೆಲ ಕಾಲ ಛಾಪು ಮೂಡಿಸಿದ್ದಾರೆ. ಮಾಜಿ ಶಾಸಕ ಡಿ ಆರ್ ಪಾಟೀಲ ಅವರ ನಿಕಟವರ್ತಿ ಆಗಿರುವ ಪಾಟೀಲರು, 2004ರ ಅವಧಿಯಲ್ಲಿ ಗದಗ ಎಪಿಎಂಸಿ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಪಾಟೀಲ ಅವರ ರಾಜಕೀಯ ಪ್ರವೇಶ ಆಕಸ್ಮಿಕವಾಗಿದ್ದು ಎಂದರೆ ತಪ್ಪಲ್ಲ. ಹಿರಿಯರ ಬೆಂಬಲ, ಜನರ ಒತ್ತಾಸೆ ಮೇರೆಗೆ ಎಪಿಎಂಸಿ ಚುನಾವಣೆಗೆ ಸ್ಪರ್ಧಿಸಿದರು. 2004ರ ಎಪಿಎಂಸಿ ಚುನಾವಣೆ ಸಮಯದಲ್ಲಿ ಬೆಟಗೇರಿಯ ನಾಗನಗೌಡ ಹಿರೇಮನಿ ಪಾಟೀಲರು ಅವರು ಎಂ ಎಸ್ ಪಾಟೀಲರಿಗೆ ಚುನಾವಣೆ ನಿಲ್ಲಬೇಕೆಂದು ಹುರಿದುಂಬಿಸಿದರು. ಆದರೆ, ಆಕಸ್ಮಿಕವಾಗಿ ಹಿರೇಮನಿ ಪಾಟೀಲರು ನಿಧನ ನಂತರ ಎಂ ಎಸ್ ಪಾಟೀಲರಿಗೆ ಟಿಕೆಟ್ ಕೈತಪ್ಪುವ ಭೀತಿ ಎದುರಾಯಿತು. ಗದಗ ನಗರದಲ್ಲಿ ಎಂ ಎಸ್ ಪಾಟೀಲರು ತಮ್ಮದೇ ವರ್ಚಸ್ಸು ಹೊಂದಿರುವುದರಿಂದ ಟಿಕೆಟ್ ಕೈತಪ್ಪಲು ಅವರ ಬೆಂಬಲಿಗರು, ಹಿತೈಷಿಗಳು ಬಿಡಲಿಲ್ಲ. ಕೊನೆಗೂ ಟಿಕೆಟ್ ಪಡೆದ ಗೆಲುವು ಸಾಧಿಸಲಾಯಿತು ಎಂಬ ಸ್ವಾರಸ್ಯಕರ ಸಂಗತಿಯನ್ನು ಅವರು ಜನಶ್ರೀ ಟೈಮ್ಸ್ ನೊಂದಿಗೆ ಹಂಚಿಕೊಂಡರು.









# ಔಷಧ ಮಳಿಗೆಗಳ ಮೇಲೆ ತೀವ್ರ ನಿಗಾ ವಹಿಸಲು ರಾಜ್ಯ ಸರ್ಕಾರ ಖಡಕ್ ಆದೇಶ

ಬೆಂಗಳೂರು: ರಾಜ್ಯದಲ್ಲಿ ಸಾರ್ವಜನಿಕರ ಆರೋಗ್ಯದ ಜತೆ ಚೆಲ್ಲಾಟವಾಡುತ್ತಿದ್ದ ಸುಮಾರು 6 ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಬೃಹತ್ ನಕಲಿ ಔಷಧಿ ಜಾಲವನ್ನು ರಾಮನಗರ ಜಿಲ್ಲೆಯ ಬಿಡದಿ ಬಳಿ ಆಹಾರ ಸುರಕ್ಷತೆ ಮತ್ತು ಔಷಧ ನಿಯಂತ್ರಣ ವಿಭಾಗದ ಅಧಿಕಾರಿಗಳು ಹಾಗೂ ಪೊಲೀಸರು ಜಂಟಿಯಾಗಿ ಭೇದಿಸಿದ್ದಾರೆ.

ಈ ಆಘಾತಕಾರಿ ಬೆಳವಣಿಗೆಯ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ಕರ್ನಾಟಕ ಸರ್ಕಾರ, ರಾಜ್ಯಾದ್ಯಂತ ಎಲ್ಲಾ ಮೆಡಿಕಲ್ ಸ್ಟೋರ್‌ಗಳು ಮತ್ತು ಔಷಧಿ ವಿತರಣಾ ಜಾಲಗಳ ಮೇಲೆ ತೀವ್ರ ನಿಗಾ ವಹಿಸಲು ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ. ಹಿಂದಿನ ಘಟನೆಗಳಿಂದ ಎಚ್ಚೆತ್ತುಕೊಂಡಿರುವ ಆರೋಗ್ಯ ಇಲಾಖೆಯು, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಔಷಧ ನಿಯಂತ್ರಕರ ನೇತೃತ್ವದಲ್ಲಿ ವಿಶೇಷ ತನಿಖಾ ತಂಡಗಳನ್ನು ರಚಿಸಲು ಸೂಚಿಸಿದೆ. ರಾಜ್ಯದ ಎಲ್ಲಾ ಔಷಧ ಮಳಿಗೆಗಳು, ಗೋಡೌನ್‌ಗಳು ಹಾಗೂ ಸಗಟು ವಿತರಕರ ಕೇಂದ್ರಗಳಲ್ಲಿ ತುರ್ತು ತಪಾಸಣೆ ನಡೆಸಲು ಆಹಾರ ಸುರಕ್ಷತೆ ಮತ್ತು ಔಷಧ ನಿಯಂತ್ರಣ ವಿಭಾಗದಿಂದ ಕಟ್ಟುನಿಟ್ಟಿನ ಸುತ್ತೋಲೆ ಹೊರಡಿಸಲಾಗಿದೆ.



**ಸಾರ್ವಜನಿಕರಿಗೆ ಎಚ್ಚರಿಕೆ :**

ಗ್ರಾಹಕರು ಯಾವುದೇ ಔಷಧಿಗಳನ್ನು ಖರೀದಿಸುವಾಗ ಅನುಮಾನ ಬಂದಲ್ಲಿ ಅಥವಾ ನಕಲಿ ಲೇಬಲ್‌ಗಳು ಕಂಡುಬಂದಲ್ಲಿ ತಕ್ಷಣವೇ ಇಲಾಖೆಯ ಗಮನಕ್ಕೆ ತರಲು ಕ್ಯೂಆರ್ ಕೋಡ್ ಆಧಾರಿತ ದೂರು ವ್ಯವಸ್ಥೆಯನ್ನು ಬಲಪಡಿಸಲಾಗಿದೆ. ಸಾರ್ವಜನಿಕರ ಜೀವದೊಂದಿಗೆ ಚೆಲ್ಲಾಟವಾಡುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು. ರಾಜ್ಯದ ಯಾವುದೇ ಮೂಲೆಯಲ್ಲಿ ಇಂತಹ ಅಕ್ರಮ ಚಟುವಟಿಕೆಗಳು ಕಂಡುಬಂದರೂ ಕಠಿಣ ಕಾನೂನು ಕ್ರಮ ಎದುರಿಸಬೇಕಾಗುತ್ತದೆ. ಈ ನಕಲಿ ಔಷಧಿ ಜಾಲದ ಮೂಲ ಬೇರುಗಳನ್ನು ಸಂಪೂರ್ಣವಾಗಿ ಮಟ್ಟಹಾಕಲು ಮತ್ತು ಸರಬರಾಜು ಸರಪಳಿಯನ್ನು ಬುಡಸಹಿತ ಕತ್ತರಿಸಲು ಸರ್ಕಾರ ಮುಂದಾಗಿದ್ದು, ಮುಂಬರುವ ದಿನಗಳಲ್ಲಿ ತಪಾಸಣೆ ಮತ್ತಷ್ಟು ತೀವ್ರಗೊಳ್ಳಲಿದೆ. ರಾಮನಗರ ಜಿಲ್ಲೆಯ ಬಿಡದಿ ಸಮೀಪದ ತಾವರೆಕೆರೆ ವ್ಯಾಪ್ತಿಯ ಫಾರ್ಮ್‌ಹೌಸ್‌ನಲ್ಲಿ ಯಾವುದೇ ಅಧಿಕೃತ ಪರವಾನಗಿ ಇಲ್ಲದೆ, ಅಕ್ರಮವಾಗಿ ಔಷಧಿಗಳಿಗೆ ಬಹುರಾಷ್ಟ್ರೀಯ ಕಂಪನಿಗಳ ನಕಲಿ ಲೇಬಲ್ ಅಂಟಿಸಿ ಮಾರಾಟ ಮಾಡುತ್ತಿದ್ದ ಜಾಲ ಪತ್ತೆಯಾಗಿದೆ.ತೆಲಂಗಾಣ ಮತ್ತು ಹಿಮಾಚಲ ಪ್ರದೇಶದಿಂದ ಕಡಿಮೆ ಬೆಲೆಗೆ (ಸುಮಾರು 600 ರೂ.) ಔಷಧಿಗಳನ್ನು ತರಿಸಿ, ಪ್ರತಿಷ್ಠಿತ ಕಂಪನಿಗಳ ಹೆಸರಿನ ನಕಲಿ ಲೇಬಲ್‌ಗಳನ್ನು ಅಂಟಿಸಿ ಅವುಗಳನ್ನು 6,000 ರೂ.ಗಳವರೆಗೆ ಮೌಲ್ಯವಿರುವ ದುಬಾರಿ ಔಷಧಿಗಳೆಂದು ಬಿಂಬಿಸಿ ಮಾರುಕಟ್ಟೆಗೆ ಬಿಡಲಾಗುತ್ತಿತ್ತು.

ಪ್ರಾಥಮಿಕ ತನಿಖೆಯಲ್ಲಿ ಈ ನಕಲಿ ಮತ್ತು ಕಳಪೆ ಗುಣಮಟ್ಟದ ಔಷಧಿಗಳು ಕೇವಲ ಸಾಮಾನ್ಯ ಮಾರುಕಟ್ಟೆಯಷ್ಟೇ ಅಲ್ಲದೆ, ಪ್ರಮುಖ ಆಸ್ಪತ್ರೆಗಳ ಐಸಿಯು ಘಟಕಗಳಲ್ಲಿರುವ ಗಂಭೀರ ರೋಗಿಗಳಿಗೂ ಪೂರೈಕೆಯಾಗುತ್ತಿತ್ತು ಎಂಬ ಆತಂಕಕಾರಿ ಮಾಹಿತಿ ಹೊರಬಂದಿದೆ. ಈ ದಂಧೆಯ ಪ್ರಮುಖ ಸೂತ್ರಧಾರಿಗಳಾದ ಪ್ರಶಾಂತ್, ಔಷಧಿ ವಿತರಕ ವೆಂಕಟೇಶ್ ಹಾಗೂ ಫಾರ್ಮ್‌ಹೌಸ್ ವ್ಯವಸ್ಥಾಪಕರನ್ನು ಪೊಲೀಸರು ವಶಕ್ಕೆ ಪಡೆದಿದ್ದು, ವಿಚಾರಣೆ ಮುಂದುವರಿದಿದೆ. ದಾಳಿ ವೇಳೆ ಸುಮಾರು 5 ರಿಂದ 6 ಕೋಟಿ ರೂ. ಮೌಲ್ಯದ ನಕಲಿ ಔಷಧಿಗಳು, ಖಾಲಿ ಬಾಟಲಿಗಳು ಮತ್ತು ಮುದ್ರಣ ಸಾಮಾಗ್ರಿಗಳು ಜಪ್ತಿಗೊಂಡಿವೆ.

## ವರಮಹಾಲಕ್ಷ್ಮಿ ಹಬ್ಬದ ಮುನ್ನಾ ದಿನವೇ ದುಬಾರಿಯಾದ ಚಿನ್ನ, ಬೆಳ್ಳಿ



ಬೆಂಗಳೂರು: ವರಮಹಾಲಕ್ಷ್ಮಿ ಮುನ್ನಾ ದಿನವಾದ ಇಂದು ಚಿನ್ನ, ಬೆಳ್ಳಿ ದರಗಳಲ್ಲಿ ಭಾರೀ ಪ್ರಮಾಣದ ಏರಿಕೆಯಾಗಿದೆ. ನಿನ್ನೆಯಷ್ಟೇ ಕುಸಿತ ಕಂಡಿದ್ದ ಚಿನ್ನ, ಬೆಳ್ಳಿ ದರಗಳು ದಿಢೀರ್ ಏರಿಕೆ ಕಂಡಿದ್ದು, ಗ್ರಾಹಕರಲ್ಲಿ ಆತಂಕವನ್ನು ಉಂಟು ಮಾಡಿವೆ. ವರಮಹಾಲಕ್ಷ್ಮಿ ಹಬ್ಬದ ಸಂದರ್ಭದಲ್ಲಿ ಆಭರಣಪ್ರಿಯರು ಹೆಚ್ಚಿನ ಸಂಖ್ಯೆಯಲ್ಲಿ ಚಿನ್ನ, ಬೆಳ್ಳಿ ಖರೀದಿಸುವ ಸಂಪ್ರದಾಯವಿದೆ. ಹೀಗಾಗಿ ಹಬ್ಬಕ್ಕೆ ಬೆಲೆ ಏರಿಕೆಯ ಬಿಸಿ ಗ್ರಾಹಕರನ್ನು ತಟ್ಟತೊಡಗಿದೆ.

ಕಳೆದ 5 ದಿನಗಳಿಂದ ನಿರಂತರ ಏರಿಕೆ ಕಂಡಿದ್ದ 24 ಕ್ಯಾರೆಟ್‌ನ ಒಂದು ಗ್ರಾಂ ಚಿನ್ನ 92 ರೂ. ಹಾಗೂ 22 ಕ್ಯಾರೆಟ್‌ನ ಒಂದು ಗ್ರಾಂ ಚಿನ್ನ 85 ರೂ.ನಷ್ಟು ನಿನ್ನೆ ಕಡಿಮೆಯಾಗಿತ್ತು. ಆದ-ರೆ ಇಂದು 24 ಕ್ಯಾರೆಟ್‌ನ ಒಂದು ಗ್ರಾಂ ಚಿನ್ನ 430 ರೂ.ನಷ್ಟು ಏರಿಕೆಯಾಗಿದ್ದು, 15,927 ರೂ.ಗೆ ತಲುಪಿದೆ. 22 ಕ್ಯಾರೆಟ್‌ನ ಚಿನ್ನವು ಒಂದು ಗ್ರಾಂಗೆ 395 ರೂ.ನಷ್ಟು ಹೆಚ್ಚಾಗಿದ್ದು, 14,600 ರೂ. ನಷ್ಟಿದೆ. 18 ಕ್ಯಾರೆಟ್‌ನ ಚಿನ್ನವು ಒಂದು ಗ್ರಾಂಗೆ 323 ರೂ. ಹೆಚ್ಚಳವಾಗಿದ್ದು, 11,946 ರೂ.ನಷ್ಟಿದೆ. ಜುಲೈನಲ್ಲಿ ಇಳಿಮುಖವಾಗಿದ್ದ ಚಿನ್ನದ ದರವು ಆಗಸ್ಟ್‌ನಲ್ಲಿ ಏರುಗತಿಯಲ್ಲೇ ಸಾಗುತ್ತಿದೆ. ಆಗೊಮೆ, ಈಗೊಮೆ ಅಲ್ಪಪ್ರಮಾಣದಲ್ಲಿ ಇಳಿಕೆಯಾದರೂ ಮತ್ತೆ ಚೇತರಿಕೆ ಕಂಡು ದುಬಾರಿ ದರದತ್ತ ಸಾಗುತ್ತಿದೆ. ಆ.12 ರಿಂದ ಸ್ಥಿರವಾಗಿದ್ದ ಬೆಳ್ಳಿಯು ಆ.14 ರಂದು ಒಂದು ಕೆಜಿಗೆ 5 ಸಾವಿರ ರೂ. ಇಳಿಕೆಯಾಗಿದ್ದು, ನಂತರ ಆ.18 ರವರೆಗೂ ಅದೇ ದರ ಮುಂದುವರೆದಿತ್ತು.ನಿನ್ನೆ ಮತ್ತೆ 5 ಸಾವಿರ ಇಳಿಕೆಯಾಗಿ ಒಂದು ಕೆಜಿಗೆ 2,45,000 ರೂ.ನಷ್ಟಿದ್ದ ಬೆಳ್ಳಿಯ ದರ ಇಂದು ಮತ್ತೆ 10 ಸಾವಿರ ರೂ. ಹೆಚ್ಚಳ ಕಂಡಿದ್ದು, 2.55 ಲಕ್ಷಕ್ಕೆ ಏರಿಕೆಯಾಗಿ ಗ್ರಾಹಕರು ಹುಬ್ಬೇರಿಸುವಂತೆಯಾಗಿದೆ.

## ಈ ಬಾರಿಯ ಮೈಸೂರು ದಸರಾದಲ್ಲಿ ಕಂಬಳ ಆಯೋಜನೆ ಬಹುತೇಕ ಫಿಕ್ಸ್



ಮೈಸೂರು: ಈ ಬಾರಿಯ ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದಲ್ಲಿ ಕರಾವಳಿಯ ಸಾಂಪ್ರದಾಯಿಕ ಮತ್ತು ಜನಪ್ರಿಯ ಕ್ರೀಡೆಯಾದ ಕಂಬಳವನ್ನು ಆಯೋಜಿಸಲು ರಾಜ್ಯ ಸರ್ಕಾರ ನಿರ್ಧ-ರಿಸಿದೆ. ದಸರಾದಲ್ಲಿ ಕಂಬಳ ನಡೆಸಲು ಸರ್ಕಾರ ಈಗಾಗಲೇ ಸ್ಥಳ ಗುರುತಿಸಿ ಪರಿಶೀಲನೆ ನಡೆಸಿತ್ತು. ಆರಂಭದಲ್ಲಿ ಕೆಲವು ಕಡೆಯಿಂದ ವಿರೋಧ ವ್ಯಕ್ತವಾಗಿದ್ದರೂ, ಸರ್ಕಾರ ಕಂಬಳ ಆಯೋಜನೆಗೆ ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಕಂಬಳಕ್ಕಾಗಿ ಪ್ರತ್ಯೇಕ ಉಪಸಮಿತಿಯನ್ನು ರಚಿಸಲಾಗಿದ್ದು, ಈ ಬಾರಿ ಕಂಬಳ ನಡೆಯುವುದು ಬಹುತೇಕ ಖಚಿತವಾಗಿದೆ.

**ಕಂಬಳ ಉಪಸಮಿತಿ ರಚನೆ :**

ನಾಡಹಬ್ಬ ದಸರಾ ಆಚರಣೆಗಾಗಿ ರಾಜ್ಯ ಸರ್ಕಾರ ವಿವಿಧ ಉಪಸಮಿತಿಗಳನ್ನು ರಚಿಸಿದೆ. ಅದರಲ್ಲಿ ಕಂಬಳ ಉಪಸಮಿತಿಯೂ ಸೇರಿದೆ.ಈ ಉಪಸಮಿತಿಗೆ ಮೈಸೂರು ಜಿಲ್ಲಾ ಪಂಚಾಯತ್ ಸಿಇಒ ಎಸ್.ಯುಕೇಶ್ ಕುಮಾರ್ ಅವರನ್ನು ಉಪ ವಿಶೇಷಾಧಿಕಾರಿಯಾಗಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಭೀಮಪ್ಪ ಲಾಳಿ ಅವರನ್ನು ಕಾರ್ಯಾಧ್ಯಕ್ಷರಾಗಿ, ಉಪ ಅರಣ್ಯಾಧಿಕಾರಿ ಪರಮೇಶ್ ಅವರನ್ನು ಸದಸ್ಯರಾಗಿ ನೇಮಿಸಲಾಗಿದೆ. ಪದನಾಭ ಮತ್ತು ಮೈತ್ರಿ ಅವರನ್ನು ಕಾರ್ಯದರ್ಶಿಗಳಾಗಿ ನೇಮಕ ಮಾಡಲಾಗಿದೆ.

**ದಸರಾ ಉಪಸಮಿತಿಗಳು :**

ಈ ಬಾರಿಯ ದಸರಾ ಆಚರಣೆಗಾಗಿ ಸ್ವಾಗತ, ಆಮಂತ್ರಣ ಮತ್ತು ಸ್ಥಳಾವಕಾಶ, ಬಂದೋಬಸ್ತ್, ಪಂಜಿನ ಕವಾಯತು, ಮೆರವಣಿಗೆ ಮತ್ತು ಸ್ತಬ್ಧಚಿತ್ರ, ರೈತ ದಸರಾ, ಸಾಂಸ್ಕೃತಿಕ ದಸರಾ, ಲಲಿತ ಕಲೆ ಮತ್ತು ಕರಕುಶಲ ಕಲೆ, ದೀಪಾಲಂಕಾರ, ಕವಿಗೋಷ್ಠಿ, ಯೋಗ ದಸರಾ, ಯುವ ಸಂಭ್ರಮ, ಯುವ ದಸರಾ, ಮಹಿಳಾ ಮತ್ತು ಮಕ್ಕಳ ದಸರಾ, ಆಹಾರ ಮೇಳ, ಕಂಬಳ, ಕುಸ್ತಿ, ಗಜಪಯಣ ಮತ್ತು ಕ್ರೀಡೆ ಸೇರಿದಂತೆ ವಿವಿಧ ಉಪಸಮಿತಿಗಳನ್ನು ರಚಿಸಲಾಗಿದೆ. ಕರಾವಳಿ ಭಾಗದಲ್ಲಿ ಜನಪ್ರಿಯವಾಗಿರುವ ಕಂಬಳ ಕ್ರೀಡೆ ಇದೇ ಮೊದಲ ಬಾರಿಗೆ ಮೈಸೂರು ದಸರಾ ಮಹೋತ್ಸವದಲ್ಲಿ ಸ್ಥಾನ ಪಡೆಯಲಿರುವುದು ವಿಶೇಷವಾಗಿದೆ.

## ಹಾವೇರಿ : ನಿಂತಿದ್ದ ಲಾರಿಗೆ ಕಾರು ಡಿಕ್ಕಿಯಾಗಿ ಮೂವರ ದುರ್ಮರಣ



ಹಾವೇರಿ: ಅತಿವೇಗವಾಗಿ ಬಂದ ಕಾರು ನಿಂತಿದ್ದ ಲಾರಿಗೆ ಡಿಕ್ಕಿ ಹೊಡೆದ ಪರಿಣಾಮ ಮೂವರು ಸ್ಥಳದಲ್ಲೇ ಮೃತಪಟ್ಟಿರುವ ದಾರುಣ ಘಟನೆ ರಾಣೇಬೆನ್ನೂರು ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದೆ.

ಮೃತರನ್ನು ದಾವಣಗೆರೆಯ ನಿಟವಳ್ಳಿ ಮೌನೇಶ್ವರ ಬಡಾವಣೆ ನಿವಾಸಿಗಳಾದ ಸಿದ್ಧಾರ್ಥ (27), ಹಸನುಖಿ (29) ಮತ್ತು ಯಶೋಧಾಬಾಯಿ (51) ಎಂದು ಗುರುತಿಸಲಾಗಿದೆ. ಅಪಘಾತದಲ್ಲಿ ಗಾಯಗೊಂಡಿರುವ ಸೌಂದರ್ಯ (26), ಸಿಂಧೂ (24) ಹಾಗೂ ಒಂದು ವರ್ಷದ ಮಗು ಕಶ್ವಶ್ರೀ ಅವರನ್ನು ದಾವಣಗೆರೆಯ ಎಸ್-ಎಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಕಾರಿನಲ್ಲಿ ಮಗು ಸೇರಿದಂತೆ ಆರು ಮಂದಿ ರಾಣೇಬೆನ್ನೂರಿನಿಂದ ದಾವಣಗೆರೆಗೆ ಬೆಳಗಿನ ಜಾವ 3.30ರ ಸುಮಾರಿಗೆ ಹಿಂದಿರುಗುತ್ತಿದ್ದರು. ಚಿತ್ರದುರ್ಗ-ಹಾವೇರಿ ಜಿಲ್ಲೆ ಗಡಿಯ ಚಳಗೇರಿ ಟೋಲ್ ಬಳಿ ಲಾರಿ ನಿಂತಿರುವುದು ಗಮನಕ್ಕೆ ಬಾರದೆ ಕಾರು ಡಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ. ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ರಾಣೇಬೆನ್ನೂರು ಗ್ರಾಮೀಣ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು. ಕಾರಿನೊಳಗೆ ಸಿಕ್ಕಿಕೊಂಡಿದ್ದ ಮೂವರ ಮೃತದೇಹಗಳನ್ನು ಹೊರತೆಗೆದು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದರು. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ದಕ್ಷಿಣ ರಾಜ್ಯಗಳಿಗೆ ನಿಧಿ ಹಂಚಿಕೆ, ರಾಜಕೀಯ ಪ್ರಾತಿನಿಧ್ಯ, ಗೌರವ ನೀಡಿ : ಕೇಂದ್ರಕ್ಕೆ ಸಿಎಂ ಡಿಕೆಶಿ ಆಗ್ರಹ

ಮಹಾಬಲಿಪುರಂ: ದಕ್ಷಿಣ ರಾಜ್ಯಗಳಿಗೆ ನಿಧಿ ಹಂಚಿಕೆ, ರಾಜಕೀಯ ಪ್ರಾತಿನಿಧ್ಯ ಹಾಗೂ ಗೌರವದಲ್ಲಿ ನ್ಯಾಯ ಒದಗಿಸಬೇಕು ಎಂದು ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಒತ್ತಾಯಿಸಿದ್ದಾರೆ.ತಮಿಳುನಾಡಿನ ಮಹಾಬಲಿಪುರಂನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ದಕ್ಷಿಣ ವಲಯ ಮಂಡಳಿಯ 31ನೇ ಸಭೆಯಲ್ಲಿ ಮಾತನಾಡಿದ ಅವರು, ದಕ್ಷಿಣ ಭಾರತ ದೇಶದ ಆರ್ಥಿಕತೆಯ ಪ್ರಮುಖ ಎಂಜಿನ್ ಆಗಿದೆ ಎಂದು ಹೇಳಿದರು.

ದಕ್ಷಿಣ ಭಾರತದ ಐದು ರಾಜ್ಯಗಳು ದೇಶದ ಒಟ್ಟು ಜನಸಂಖ್ಯೆಯ ಸುಮಾರು ಶೇ.20ರಷ್ಟನ್ನು ಹೊಂದಿದ್ದರೂ, ದೇಶದ ಜಿಡಿಪಿಗೆ ಸುಮಾರು ಶೇ.33ರಷ್ಟು ಕೊಡುಗೆ ನೀಡುತ್ತಿವೆ. ಕರ್ನಾಟಕ ಈ ಆರ್ಥಿಕ ಬೆಳವಣಿಗೆಯ ಪ್ರಮುಖ ಚಾಲಕ ಶಕ್ತಿಗಳಲ್ಲಿ ಒಂದಾಗಿದೆ ಎಂದು ಶಿವಕುಮಾರ್ ಹೇಳಿದರು. ಕರ್ನಾಟಕ ದೇಶದ ಸಾಫ್?ಟವೇರ್ ರಫ್ತಿನಲ್ಲಿ ಶೇ.42ರಷ್ಟು ಪಾಲು ಹೊಂದಿದ್ದು, ಸುಮಾರು 1,100 ಜಾಗತಿ-ಕ ಸಾಮರ್ಥ್ಯ ಕೇಂದ್ರಗಳಿಗೆ ಆತಿಥ್ಯ ನೀಡುತ್ತಿದೆ. 2019ರಿಂದ 2025ರ ಅವಧಿಯಲ್ಲಿ ದೇಶಕ್ಕೆ ಬಂದಿರುವ ವಿದೇಶಿ ನೇರ ಹೂಡಿಕೆಯ ಇಕ್ವಿಟಿ ಒಳಹರಿವಿನಲ್ಲಿ ಕರ್ನಾಟಕದ ಪಾಲು ಶೇ.21ಕ್ಕಿಂತ ಹೆಚ್ಚಿದೆ ಎಂದು ಅವರು ತಿಳಿಸಿದರು.

ದೇಶದ ಜನಸಂಖ್ಯೆಯಲ್ಲಿ ಕರ್ನಾಟಕದ ಪಾಲು ಶೇ.5.5ರಷ್ಟಿದ್ದರೂ, ದೇಶದ ಜಿಡಿಪಿಗೆ ರಾಜ್ಯವು ಸುಮಾರು ಶೇ.9ರಷ್ಟು ಕೊಡುಗೆ ನೀಡುತ್ತಿದೆ ಎಂದರು.ಜಿಜಿನಾವು ನಮ ಜವಾಬ್ದಾರಿಯನ್ನು ನಿರಂತರವಾಗಿ ನಿರ್ವಹಿಸುತ್ತಿದ್ದೇವೆ. ನಾವು ಕೊಡುಗೆ ನೀಡುತ್ತೇವೆ, ನಿರ್ಮಿಸುತ್ತೇವೆ, ಬೆಳೆಯುತ್ತೇವೆ ಮತ್ತು ದೇಶವನ್ನು ಮುನ್ನಡೆಸುತ್ತೇವೆ. ಪ್ರತಿಯಾಗಿ ಕೇಂದ್ರ ಸರ್ಕಾರದಿಂದ ನಾವು ಕೇಳುವುದು ಒಂದೇ. ನಾವು ಎಷ್ಟು ಹಂಚಿಕೊಳ್ಳುತ್ತೇವೆಯೋ, ಅಷ್ಟೇ ಕಾಳಜಿಯನ್ನು ನಮ ಮೇಲೂ ತೋರಿಸಿ ಎಂದು ಶಿವಕುಮಾರ್ ಹೇಳಿದರು.

**ತೆರಿಗೆ ಹಂಚಿಕೆಯಲ್ಲಿ ಕರ್ನಾಟಕಕ್ಕೆ ನ್ಯಾಯ ಬೇಕು:**

15ನೇ ಹಣಕಾಸು ಆಯೋಗದ ಅವಧಿಯಲ್ಲಿ ವಿಭಜಿಸಬಹುದಾದ ತೆರಿಗೆ ಹಂಚಿಕೆಯಲ್ಲಿ ಕರ್ನಾಟಕದ ಪಾಲು ಶೇ.4.7ರಿಂದ ಶೇ.3.6ಕ್ಕೆ ಇಳಿಕೆಯಾಗಿದ್ದು, ಇದ-ರಿಂದ ಆರು ವರ್ಷಗಳಲ್ಲಿ ರಾಜ್ಯಕ್ಕೆ ಅಂ-ದಾಜು 65,000 ಕೋಟಿ ನಷ್ಟವಾಗಿದೆ ಎಂದು ಅವರು ಹೇಳಿದರು.15ನೇ ಹಣಕಾಸು ಆಯೋಗ ಶಿಫಾರಸು ಮಾಡಿದ್ದ 5,495 ಕೋಟಿ ವಿಶೇಷ ಅನುದಾನ ಹಾಗೂ 6,000 ಕೋಟಿ ರಾಜ್ಯ-ನಿರ್ದಿಷ್ಟ ಅನುದಾನ ಇನ್ನೂ ಬಿಡುಗಡೆಯಾಗಿಲ್ಲ ಎಂದು ಅವರು ಆರೋಪಿಸಿದರು. 16ನೇ ಹಣ-ಕಾಸು ಆಯೋಗದ ಅಡಿಯಲ್ಲಿ ಕರ್ನಾಟಕದ ಪಾಲು ಶೇ.4.131ಕ್ಕೆ ಏರಿಕೆಯಾಗಿರುವುದನ್ನು ಸ್ವಾಗತಿಸಿದ ಶಿವಕುಮಾರ್, ಅಂತಿಮವಾಗಿ ರಾಜ್ಯದ ಪಾಲನ್ನು ಮತ್ತೆ ಶೇ.4.7ಕ್ಕೆ ಏರಿಸಬೇಕು ಎಂದು ಆಗ್ರಹಿಸಿದರು. ಕರ್ನಾಟಕ ಜಿಎಸ್ಟಿ ಮತ್ತು ಆದ-ಾಯ ತೆರಿಗೆಗೆ ಎರಡನೇ ಅತಿ ದೊಡ್ಡ ಕೊಡುಗೆ ನೀಡುವ ರಾಜ್ಯವಾಗಿದೆ. ಬೆಳವಣಿಗೆ ಮತ್ತು ಆದ-ಾಯದಲ್ಲಿ ಉತ್ತಮ ಸಾಧನೆ ಮಾಡುವ ರಾಜ್ಯವನ್ನು ಪ್ರೋತ್ಸಾಹಿಸಬೇಕೇ ಹೊರತು ದಂಡಿಸಬಾರದು ಎಂದು ಹೇಳಿದರು.

ಕರ್ನಾಟಕಕ್ಕೆ ಹೆಚ್ಚುವರಿ ಯೋಜನೆಗಳ ಮೂಲಕ ಪರಿಹಾರ ಒದಗಿಸಬೇಕು ಎಂದು ಒತ್ತಾಯಿಸಿದ ಅವರು, ಬೆಂಗಳೂರುಮುಂಬೈ ಹೈಸ್ಪೀಡ್ ರೈಲು ಯೋಜನೆ, ಎಸ್ ಟಿ ಆರ್ ಆರ್ ದಕ್ಷಿಣ, ರಾಯಚೂರಿನಲ್ಲಿ ಎಐಐಎಂಎಸ್ ಹಾಗೂ ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಪ್ಯಾಕೇಜ್ ನೀಡುವಂತೆ ಕೇಂದ್ರವನ್ನು ಕೋರಿದರು.

**ದಕ್ಷಿಣ ರಾಜ್ಯಗಳ ರಾಜಕೀಯ ಧ್ವನಿ ಕುಗ್ಗಬಾರದು:**

ಪ್ರಸ್ತಾವಿತ ಲೋಕಸಭಾ ಕ್ಷೇತ್ರಗಳ ಮರುವಿಂಗಡಣೆ ವಿಚಾರದಲ್ಲಿಯೂ ಶಿವಕುಮಾರ್ ತಮ ನಿಲುವನ್ನು ಸ್ಪಷ್ಟಪಡಿಸಿದರು.



ಜನಸಂಖ್ಯೆ ನಿಯಂತ್ರಣದಲ್ಲಿ ದಕ್ಷಿಣ ರಾಜ್ಯಗಳು ಯಶಸ್ವಿಯಾಗಿರುವುದೇ ಅವುಗಳ ರಾಜಕೀಯ ಪ್ರಾತಿನಿಧ್ಯ ಕಡಿಮೆಯಾಗಲು ಕಾರಣವಾಗಬಾರದು ಎಂದು ಅವರು ಹೇಳಿದರು. ಯಾವುದೇ ದಕ್ಷಿಣ ರಾಜ್ಯ ತನ್ನ ಲೋಕಸಭಾ ಸ್ಥಾನಗಳನ್ನು ಕಳೆದುಕೊಳ್ಳುವುದಿಲ್ಲ ಎಂಬ ಭರವಸೆಯನ್ನು ನಾವು ಸ್ವಾಗತಿಸುತ್ತೇವೆ. ಆದರೆ ಪ್ರಾತಿನಿಧ್ಯ ಎಂದರೆ ಕೇವಲ ಸಂಖ್ಯೆಯಲ್ಲ. ಅದು ರಾಜಕೀಯ ತೂಕ ಮತ್ತು ಧ್ವನಿಯ ವಿಚಾರವೂ ಹೌದು ಎಂದರು. ಜನಸಂಖ್ಯೆ ನಿಯಂತ್ರಣಕ್ಕೆ ದಕ್ಷಿಣ ರಾಜ್ಯಗಳು ಶಿಸ್ತು ಮತ್ತು ಯಶಸ್ಸಿನೊಂದಿಗೆ ಸ್ಪಂದಿಸಿವೆ. ಅದಕ್ಕಾಗಿ ಅವುಗಳಿಗೆ ಶಿಕ್ಷೆಯಾಗಬಾರದು ಎಂದು ಅವರು ಹೇಳಿದರು.

1971ರ ಜನಗಣತಿಯ ಆಧಾರವನ್ನು ಗೌರವಿಸಬೇಕು ಮತ್ತು ದಕ್ಷಿಣ ರಾಜ್ಯಗಳ ರಾಜ-ಕೀಯ ಪ್ರಾತಿನಿಧ್ಯವು ಸಂಖ್ಯೆಯಲ್ಲಿಯೂ ಹಾಗೂ ಪ್ರಮಾಣದಲ್ಲಿಯೂ ಕಡಿಮೆಯಾಗದಂತೆ ರಕ್ಷಿಸಬೇಕು ಎಂದು ಆಗ್ರಹಿಸಿದರು.

**ಲೋಕಸಭಾ ಸ್ಥಾನಗಳ ಸಂಖ್ಯೆ ಈಗಿರುವಂತೆಯೇ ಇರಲಿ:**

ದಕ್ಷಿಣ ವಲಯ ಮಂಡಳಿಯು ಪ್ರಸ್ತುತ ಇರುವ ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ಮುಂದುವರಿಸುವಂತೆ ನಿರ್ಣಯ ಕೈಗೊಳ್ಳಬೇಕು ಎಂದು ಶಿವಕುಮಾರ್ ಒತ್ತಾಯಿಸಿದರು. ಅದೇ ಸ್ಥಾನಗಳ ಸಂಖ್ಯೆಯೊಳಗೆ ಮಹಿಳೆಯರಿಗೆ ಮೀಸಲಾತಿ ಕಲ್ಪಿಸಬೇಕು ಎಂದು ಅವರು ಸಲಹೆ ನೀಡಿದರು. ಮಹಿಳೆಯರು ತಮ ನ್ಯಾಯಯುತ ಪ್ರಾತಿನಿಧ್ಯಕ್ಕಾಗಿ ಬಹಳ ಕಾಲದಿಂದ ಕಾಯುತ್ತಿದ್ದಾರೆ. ಹೊಸ ಜನಗಣತಿಯವರೆಗೆ ಅವರು ಮೀಸಲಾತಿಗೆ ಕಾಯಬೇಕಾದ ಅಗತ್ಯವಿಲ್ಲ ಎಂದು ಹೇಳಿದರು. ಈ ವಿಚಾರದಲ್ಲಿ ದಕ್ಷಿಣ ರಾಜ್ಯಗಳ ಮುಖ್ಯಮಂತ್ರಿಗಳು ಒಗ್ಗಟ್ಟಿನಿಂದ ಬೆಂಬಲ ನೀಡಬೇಕು ಎಂದು ಅವರು ಕರೆ ನೀಡಿದರು.

**ನೀರಿನ ಹಂಚಿಕೆ ಬದಲು ನೀರಿನ ಸಹಕಾರ:**

ಕಾವೇರಿ, ಕೃಷ್ಣಾ, ತುಂಗಭದ್ರಾ, ಪೆನ್ನಾರ್ ಮತ್ತು ಪಾಲಾರ್ ನದಿಗಳು ದಕ್ಷಿಣ ಭಾರತದ ಜೀವನಾಡಿಗಳಾಗಿವೆ ಎಂದು ಹೇಳಿದ ಶಿವಕುಮಾರ್, ನೀರಿನ ಹಂಚಿಕೆಯಿಂದ ನೀರಿನ ಸಹಕಾರದತ್ತ ಸಾಗಬೇಕು ಎಂದು ಕರೆ ನೀಡಿದರು. ಜೂನ್ 25ರಂದು ಕರ್ನಾಟಕ, ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ನಡುವೆ ನಡೆದ ಸಭೆಯನ್ನು ಉಲ್ಲೇಖಿಸಿದ ಅವರು, ಮಾತುಕತೆಯ ಮೂಲಕ ಅಂತಾರಾಜ್ಯ ನೀರಿನ ಸಮಸ್ಯೆಗಳನ್ನು ಬಗೆಹರಿಸಬಹುದು ಎಂಬುದನ್ನು ಮೂರು ರಾಜ್ಯಗಳು ತೋರಿಸಿವೆ ಎಂದರು. ತಮಿಳುನಾಡಿನ ಮಹಾಬಲಿಪುರಂನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ, ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್, ಕೇರಳ ಮುಖ್ಯಮಂತ್ರಿ ವಿ.ಡಿ.ಸತೀಶನ್, ಆಂಧ್ರ ಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು, ತೆಲಂಗಾಣ ಉಪಮುಖ್ಯಮಂತ್ರಿ ಭಟ್ಟಿ ವಿಕ್ರಮಾರ್ಕ ಸೇರಿದಂತೆ ದಕ್ಷಿಣ ರಾಜ್ಯಗಳ ಸಚಿವರು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು. ಕರ್ನಾಟಕದ ಐಟಿ-ಬಿಟಿ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಕೂಡ ಉಪಸ್ಥಿತರಿದ್ದರು.

# ನಾಗೇಂದ್ರ ವಿಚಾರಣೆಗೆ ರಾಜ್ಯಪಾಲರ ಅನುಮತಿ ಕೋರಿದ ಸಿಬಿಐ

ಬೆಂಗಳೂರು: ರಾಜ್ಯ ರಾಜಕಾರಣದಲ್ಲಿ ಭಾರೀ ಚರ್ಚೆಗೆ ಕಾರಣವಾಗಿರುವ ಮಹರ್ಷಿ ವಾಲೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಣ ದುರುಪಯೋಗ ಪ್ರಕರಣದಲ್ಲಿ ಸಚಿವ ಬಿ. ನಾಗೇಂದ್ರ ಅವರ ಕಾನೂನು ಸಂಕಷ್ಟ ಮತ್ತಷ್ಟು ಗಂಭೀರವಾಗುವ ಸಾಧ್ಯತೆ ಇದೆ. ಪ್ರಕರಣದ ತನಿಖೆ ನಡೆಸುತ್ತಿರುವ ಸಿಬಿಐ, ನಾಗೇಂದ್ರ ಅವರನ್ನು ವಿಚಾರಣೆಗೊಳಪಡಿಸಲು ಹಾಗೂ ಕಾನೂನು ಕ್ರಮ ಮುಂದುವರಿಸಲು ರಾಜ್ಯಪಾಲರ ಅನುಮತಿ ಕೋರಿ ಪತ್ರ ಬರೆದಿದೆ ಎನ್ನಲಾಗಿದೆ.

ನಿಗಮದ ಸುಮಾರು 89.63 ಕೋಟಿ ರೂ.ಗಳನ್ನು ನಕಲಿ ಚೆಕ್‌ಗಳು ಮತ್ತು ಆರ್‌ಟಿಜಿಎಸ್ ಮೂಲಕ ಅಕ್ರಮವಾಗಿ ವರ್ಗಾಯಿಸಿ, ನೂರಾರು ಬೇನಾಮಿ ಖಾತೆಗಳ ಮೂಲಕ ದುರ್ಬಳಕೆ ಮಾಡಲಾಗಿದೆ ಎಂಬುದು ತನಿಖೆಯ ಪ್ರಮುಖ ಆರೋಪವಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ದೋಷಾರೋಪಪಟ್ಟಿ ಸಲ್ಲಿಸಿದ್ದು, ನಾಗೇಂದ್ರ




ಅವರನ್ನು ಪ್ರಮುಖ ಆರೋಪಿಗಳ ಪೈಕಿ ಒಬ್ಬರಾಗಿ ಉಲ್ಲೇಖಿಸಿದೆ ಎನ್ನಲಾಗಿದೆ. ಹಗರಣದ ಆರೋಪಗಳು ತೀವ್ರಗೊಂಡ ಹಿನ್ನೆಲೆಯಲ್ಲಿ 2024ರಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ನಾಗೇಂದ್ರ ಅವರನ್ನು ಜಾರಿ ನಿರ್ದೇಶನಾಲಯ ಕೂಡ ಬಂಧಿಸಿ ವಿಚಾರಣೆ ನಡೆಸಿತ್ತು. ಬಳಿಕ ಅವರು ನ್ಯಾಯಾಲಯದಿಂದ ಜಾಮೀನು ಪಡೆದು ಹೊರಬಂದಿದ್ದರು. ಇತ್ತೀಚೆಗೆ ಅವರು ಮತ್ತೆ ಸಚಿವ ಸಂಪುಟಕ್ಕೆ ಸೇರ್ಪಡೆಯಾಗಿರುವುದು ಬಿಜೆಪಿ ಮತ್ತು ಜೆಡಿಎಸ್ ಸೇ-ರಿದಂತೆ ಪ್ರತಿಪಕ್ಷಗಳ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ರಾಜ್ಯ ಸರ್ಕಾರದ ವಾದದ ಪ್ರಕಾರ, ಆರೋಪಪಟ್ಟಿ ಸಲ್ಲಿಕೆಯಾದ ಮಾತ್ರಕ್ಕೆ ವ್ಯಕ್ತಿ ಅಪರಾಧಿ ಎಂದು ಪರಿಗಣಿಸಲಾಗುವುದಿಲ್ಲ. ಆರೋಪಗಳು ನ್ಯಾಯಾಲಯದಲ್ಲಿ ಸಾಬೀತಾಗುವವರೆಗೆ ನಿರ್ದೋಷಿತ್ವದ ಹಕ್ಕು ಅನ್ವಯಿಸುತ್ತದೆ. ಇದೇ ವೇಳೆ, ನಾಗೇಂದ್ರ ಅವರನ್ನು ಸಚಿವರಾಗಿ ಮುಂದುವರಿಸುವ ಸರ್ಕಾರದ ನಿರ್ಧಾರವನ್ನು ಪ್ರತಿಪಕ್ಷಗಳು ನೈತಿಕ ಪ್ರಶ್ನೆಯಾಗಿ ಮುಂದಿಟ್ಟಿವೆ. ರಾಜ್ಯಪಾಲರ ಅನುಮತಿ ದೊರೆತರೆ ನಾಗೇಂದ್ರ ವಿರುದ್ಧದ ಕಾನೂನು ಪ್ರಕ್ರಿಯೆ ಮತ್ತಷ್ಟು ವೇಗ ಪಡೆಯುವ ಸಾಧ್ಯತೆ ಇದೆ. ಮುಂದಿನ ಹಂತದಲ್ಲಿ ನ್ಯಾಯಾಲಯ ಆರೋಪಪಟ್ಟಿಯನ್ನು ಪರಿಗಣಿಸುವುದು, ಆರೋಪ ನಿಗದಿ ಮತ್ತು ವಿಚಾರಣೆಯ ಪ್ರಗತಿ ಪ್ರಕರಣದ ದಿಕ್ಕನ್ನು ನಿರ್ಧರಿಸಲಿದೆ.

ಈ ಬೆಳವಣಿಗೆ ಕಾಂಗ್ರೆಸ್ ಸರ್ಕಾರಕ್ಕೆ ರಾಜಕೀಯವಾಗಿಯೂ ಸವಾಲಾಗಿದೆ. ನಾಗೇಂದ್ರ ಅವರನ್ನು ಸಂಪುಟದಲ್ಲಿ ಮುಂದುವರಿಸುವುದೇ ಅಥವಾ ಪ್ರಕರಣದ ಹಿನ್ನೆಲೆಯಲ್ಲಿ ಕ್ರಮ ಕೈಗೊಳ್ಳುವುದೇ ಎಂಬ ಪ್ರಶ್ನೆ ಇದೀಗ ಮತ್ತಷ್ಟು ಮಹತ್ವ ಪಡೆದಿದೆ.

## ಕಾಶ್ಮೀರ ಕುರಿತ ಅಮೆರಿಕ ರಾಯಭಾರಿಯ ಹೇಳಿಕೆಗೆ 'ಪಾಪಿ'ಸ್ತಾನದಲ್ಲಿ ಉರಿ ಉರಿ




ನವದೆಹಲಿ/ಶ್ರೀನಗರ: ಜಮ್ಮು ಮತ್ತು ಕಾಶ್ಮೀರಕ್ಕೆ ಸಂಬಂಧಿಸಿದಂತೆ ಅಮೆರಿಕದ ರಾಜತಾಂತ್ರಿಕ ಧೋರಣೆಯು ಮತ್ತೊಮ್ಮೆ ಭಾರತ ಮತ್ತು ಪಾಕಿಸ್ತಾನದ ನಡುವೆ ರಾಜತಾಂತ್ರಿಕ ಚರ್ಚೆಗೆ ಗ್ರಾಸವಾಗಿದೆ. ಅಮೆರಿಕದ ಉನ್ನತ ಅಧಿಕಾರಿಯೊಬ್ಬರು ಜಮ್ಮು ಮತ್ತು ಕಾಶ್ಮೀರವನ್ನು ಭಾರತದ ಪ್ರಮುಖ ಭಾಗವೆಂದು ಬಣ್ಣಿಸಿರುವುದು ಇಸ್ಲಾಮಾಬಾದ್‌ನ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಅಮೆರಿಕದ ಹಿರಿಯ ಅಧಿಕಾರಿ ಅಥವಾ ರಾಯಭಾರಿ ಜಮ್ಮು ಮತ್ತು ಕಾಶ್ಮೀರಕ್ಕೆ ಭೇಟಿ ನೀಡಿ, ಈ ಪ್ರದೇಶದ ಸ್ಥಿತಿಗತಿಗಳ ಕುರಿತು ಮಾತನಾಡಿದ್ದು, ಜಮ್ಮು ಮತ್ತು ಕಾಶ್ಮೀರವನ್ನು ಭಾರತದ ಅವಿಭಾಜ್ಯ ಅಂಗವೆಂದು ಉಲ್ಲೇಖಿಸಿದ್ದರು. ಈ ಹೇಳಿಕೆಯು ದ್ವಿಪಕ್ಷೀಯ ವಲಯದಲ್ಲಿ ತೀವ್ರ ಸಂಚಲನ ಮೂಡಿಸಿತು. ಅಮೆರಿಕದ ರಾಯಭಾರಿಯ ಹೇಳಿಕೆಯನ್ನು ತೀವ್ರವಾಗಿ ಖಂಡಿಸಿದ ಪಾಕಿಸ್ತಾನದ ವಿದೇಶಾಂಗ ಸಚಿವಾಲಯವು, ಇಸ್ಲಾಮಾಬಾದ್‌ನಲ್ಲಿರುವ ಅಮೆರಿಕದ ಉಸ್ತುವಾರಿ ರಾಯಭಾರಿ ನಟಾಲಿ ಬೇಕರ್ ಅವರನ್ನು ಕರೆಸಿ ಬಲವಾದ ಪ್ರತಿಭಟನೆಯನ್ನು ದಾಖಲಿಸಿತು. ಈ ಹೇಳಿಕೆಗಳು ವಾಸ್ತವಿಕವಾಗಿ ತಪ್ಪಾಗಿದ್ದು, ಕಾಶ್ಮೀರ ಕುರಿತ ಅಮೆರಿಕದ ದೀರ್ಘಕಾಲದ ನಿಲುವಿಗೆ ವಿರುದ್ಧವಾಗಿವೆ ಎಂದು ಪಾಕಿಸ್ತಾನ ವಾದಿಸಿದೆ. ನ್ಯಾಷನಲ್ ಕಾನ್ಫರೆನ್ಸ್ ನಾಯಕ ಒಮರ್ ಅಬ್ದುಲ್ಲಾ ಅವರು ಅಮೆರಿಕದ ರಾಯಭಾರಿಯನ್ನು ಭೇಟಿಯಾಗಿ ಭಾರತ–ಅಮೆರಿಕ ಸಂಬಂಧಗಳು ಹಾಗೂ ಜಮ್ಮು ಮತ್ತು ಕಾಶ್ಮೀರದ ಅಭಿವೃದ್ಧಿಯಲ್ಲಿ ವಾಷಿಂಗ್ಟನ್ ವಹಿಸಬಹುದಾದ ಪಾತ್ರದ ಕುರಿತು ಚರ್ಚೆ ನಡೆಸಿದರು. ಮತ್ತೊಂದೆಡೆ, ಪ್ರವಾಸೋದ್ಯಮವನ್ನು ಅವಲಂಬಿಸಿರುವ ಸಾವಿರಾರು ಕುಟುಂಬಗಳ ಅನುಕೂಲಕ್ಕಾಗಿ ಕಾಶ್ಮೀರಕ್ಕೆ ಸಂಬಂಧಿಸಿದ ಪ್ರಯಾಣ ಸಲಹೆಯನ್ನು ಮರುಪರಿಶೀಲಿಸುವಂತೆ ಮೆಹಬೂಬಾ ಮುಫ್ತಿ ಸೇರಿದಂತೆ ಇತರ ನಾಯಕರು ಒತ್ತಾಯಿಸಿದ್ದಾರೆ. ಭಿನ್ನಾಭಿಪ್ರಾಯಗಳನ್ನು ಪರಸ್ಪರ ಮಾತುಕತೆ ಮೂಲಕ ಬಗೆಹರಿಸಿಕೊಳ್ಳಬೇಕು ಎಂಬುದು ಅಮೆರಿಕದ ನಿಲುವಾಗಿದೆ. ಆದರೆ, ಕಾಶ್ಮೀರ ವಿಚಾರದಲ್ಲಿ ಯಾವುದೇ ಮೂರನೇ ದೇಶದ ಮಧ್ಯಸ್ಥಿಕೆಯನ್ನು ಭಾರತವು ಎಂದಿಗೂ ಸ್ವೀಕರಿಸುವುದಿಲ್ಲ ಮತ್ತು ಇದನ್ನು ಬಲವಾಗಿ ವಿರೋಧಿಸುತ್ತ ಬಂದಿದೆ. ದೆಹಲಿಯಲ್ಲಿನ ರಾಜತಾಂತ್ರಿಕ ಭದ್ರತೆ ಹಾಗೂ ಇತ್ತೀಚಿನ ಭದ್ರತಾ ತಪಾಸಣೆಗಳ ಭಾಗವಾಗಿ ಹೈಕಮಿಷನ್ ಸುತ್ತಮುತ್ತಲಿನ ಅನಧಿಕೃತ ತಡೆಗೋಡೆಗಳನ್ನು ತೆರವುಗೊಳಿಸುವ ಕ್ರಮಗಳೂ ಈ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಮಹತ್ವ ಪಡೆದಿವೆ.

## ವಾಲ್ಮೀಕಿ ನಿಗಮ ಹಗರಣ : ಸಚಿವ ನಾಗೇಂದ್ರ ವಿಚಾರಣೆಗೆ ಸಿಬಿಐ ಕಸರತ್ತು



ಬೆಂಗಳೂರು: ರಾಜ್ಯ ರಾಜಕಾರಣದಲ್ಲಿ ಭಾರೀ ಚರ್ಚೆಗೆ ಕಾರಣವಾಗಿರುವ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಣ ದುರುಪಯೋಗ ಪ್ರಕರಣದಲ್ಲಿ ಸಚಿವ ಬಿ. ನಾಗೇಂದ್ರ ಅವರ ಕಾನೂನು ಸಂಕಷ್ಟ ಮತ್ತಷ್ಟು ಗಂಭೀರವಾಗುವ ಸಾಧ್ಯತೆ ಇದೆ. ಪ್ರಕರಣದ ತನಿಖೆ ನಡೆಸುತ್ತಿರುವ ಸಿಬಿಐ, ನಾಗೇಂದ್ರ ಅವರನ್ನು ವಿಚಾರಣೆಗೊಳಪಡಿಸಲು ಹಾಗೂ ಕಾನೂನು ಕ್ರಮ ಮುಂದುವರಿಸಲು ರಾಜ್ಯಪಾಲರ ಅನುಮತಿ ಕೋರಿ ಪತ್ರ ಬರೆದಿದೆ ಎನ್ನಲಾಗಿದೆ.

ನಿಗಮದ ಸುಮಾರು 89.63 ಕೋಟಿ ರೂ.ಗಳನ್ನು ನಕಲಿ ಚೆಕ್‌ಗಳು ಮತ್ತು ಆರ್‌ಟಿಜಿಎಸ್ ಮೂಲಕ ಅಕ್ರಮವಾಗಿ ವರ್ಗಾಯಿಸಿ, ನೂರಾರು ಬೇನಾಮಿ ಖಾತೆಗಳ ಮೂಲಕ ದುರ್ಬಳಕೆ ಮಾಡಲಾಗಿದೆ ಎಂಬುದು ತನಿಖೆಯ ಪ್ರಮುಖ ಆರೋಪವಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ದೋಷಾರೋಪಪಟ್ಟಿ ಸಲ್ಲಿಸಿದ್ದು, ನಾಗೇಂದ್ರ ಅವರನ್ನು ಪ್ರಮುಖ ಆರೋಪಿಗಳ ಪೈಕಿ ಒಬ್ಬರಾಗಿ ಉಲ್ಲೇಖಿಸಿದೆ ಎನ್ನಲಾಗಿದೆ. ಹಗರಣದ ಆರೋಪಗಳು ತೀವ್ರಗೊಂಡ ಹಿನ್ನೆಲೆಯಲ್ಲಿ 2024ರಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ನಾಗೇಂದ್ರ ಅವರನ್ನು ಜಾರಿ ನಿರ್ದೇಶನಾಲಯ ಕೂಡ ಬಂಧಿಸಿ ವಿಚಾರಣೆ ನಡೆಸಿತ್ತು. ಬಳಿಕ ಅವರು ನ್ಯಾಯಾಲಯದಿಂದ ಜಾಮೀನು ಪಡೆದು ಹೊರಬಂದಿದ್ದರು. ಇತ್ತೀಚೆಗೆ ಅವರು ಮತ್ತೆ ಸಚಿವ ಸಂಪುಟಕ್ಕೆ ಸೇರ್ಪಡೆಯಾಗಿರುವುದು ಬಿಜೆಪಿ ಮತ್ತು ಜೆಡಿಎಸ್ ಸೇರಿದಂತೆ ಪ್ರತಿಪಕ್ಷಗಳ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. ರಾಜ್ಯ ಸರ್ಕಾರದ ವಾದದ ಪ್ರಕಾರ, ಆರೋಪಪಟ್ಟಿ ಸಲ್ಲಿಕೆಯಾದ ಮಾತ್ರಕ್ಕೆ ವ್ಯಕ್ತಿಯನ್ನು ಅಪರಾಧಿ ಎಂದು ಪರಿಗಣಿಸಲಾಗುವುದಿಲ್ಲ. ಆರೋಪಗಳು ನ್ಯಾಯಾಲಯದಲ್ಲಿ ಸಾಬೀತಾಗುವವರೆಗೆ ನಿರ್ದೋಷಿತ್ವದ ಹಕ್ಕು ಅನ್ವಯಿಸುತ್ತದೆ. ಇದೇ ವೇಳೆ, ನಾಗೇಂದ್ರ ಅವರನ್ನು ಸಚಿವರಾಗಿ ಮುಂದುವರಿಸುವ ಸರ್ಕಾರದ ನಿರ್ಧಾರವನ್ನು ಪ್ರತಿಪಕ್ಷಗಳು ನೈತಿಕ ಪ್ರಶ್ನೆಯಾಗಿ ಮುಂದಿಟ್ಟಿವೆ. ರಾಜ್ಯಪಾಲರ ಅನುಮತಿ ದೊರೆತರೆ ನಾಗೇಂದ್ರ ವಿರುದ್ಧದ ಕಾನೂನು ಪ್ರಕ್ರಿಯೆ ಮತ್ತಷ್ಟು ವೇಗ ಪಡೆಯುವ ಸಾಧ್ಯತೆ ಇದೆ. ಮುಂದಿನ ಹಂತದಲ್ಲಿ ನ್ಯಾಯಾಲಯ ಆರೋಪಪಟ್ಟಿಯನ್ನು ಪರಿಗಣಿಸುವುದು, ಆರೋಪ ನಿಗದಿ ಮತ್ತು ವಿಚಾರಣೆಯ ಪ್ರಗತಿ ಪ್ರಕರಣದ ದಿಕ್ಕನ್ನು ನಿರ್ಧರಿಸಲಿದೆ. ಈ ಬೆಳವಣಿಗೆ ಕಾಂಗ್ರೆಸ್ ಸರ್ಕಾರಕ್ಕೆ ರಾಜಕೀಯವಾಗಿಯೂ ಸವಾಲಾಗಿದೆ. ನಾಗೇಂದ್ರ ಅವರನ್ನು ಸಂಪುಟದಲ್ಲಿ ಮುಂದುವರಿಸುವುದೇ ಅಥವಾ ಪ್ರಕರಣದ ಹಿನ್ನೆಲೆಯಲ್ಲಿ ಕ್ರಮ ಕೈಗೊಳ್ಳುವುದೇ ಎಂಬ ಪ್ರಶ್ನೆ ಇದೀಗ ಮತ್ತಷ್ಟು ಮಹತ್ವ ಪಡೆದಿದೆ.

**ಜನಶ್ರೀ ಟೈಮ್ಸ್**

**ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.**

# ಹಿಂದುಳಿದವರ ಏಳಿಗೆಗೆ ಅರಸು ಕೊಡುಗೆ ಅಪಾರ : ಜಿಲ್ಲಾಧಿಕಾರಿ ಶ್ರೀಧರ

ಜನಶ್ರೀ ಟೈಮ್ಸ್ ಸುದ್ದಿ

ಗದಗ: "ಕರ್ನಾಟಕ ಕಂಡ ಅಪ್ರತಿಮ ನಾಯಕ, ಹಿಂದುಳಿದ ವರ್ಗಗಳ ಏಳಿಗೆಗೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಸಾಮಾಜಿಕ ಕ್ರಾಂತಿಯ ಹರಿಕಾರ ದೀನದಲಿತರ ಆಶಾಕಿರಣ, ಹಿಂದುಳಿದವರ ಏಳಿಗೆಗೆ ಅರಸು ಅವರ ಕೊಡುಗೆ ರಾಜ್ಯಕ್ಕೆ ಅಪಾರ, ದಿ॥ ಡಿ. ದೇವರಾಜ ಅರಸು ಅವರ ಆದರ್ಶಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಿ ಸಾಮಾಜಿಕ ಸಮಾನತೆಗೆ ಭದ್ರ ಬುನಾದಿ ಹಾಕಿದವರು ಅರಸರು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರುಗಳ ಸಹಯೋಗದಲ್ಲಿ ಶೋಷಿತರ ಸಮಗ್ರ ಅಭಿವೃದ್ಧಿಯ ಸಾಮಾಜಿಕ ಕ್ರಾಂತಿಯ ಹರಿಕಾರ ನೊಂದವರ ನಂದಾದೀಪ, ಸಾಧನೆಗಳ ಸರದಾರ, ಧೀಮಂತ ನಾಯಕ ಹಾಗೂ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿ ದಿ ॥ ಡಿ. ದೇವರಾಜ ಅರಸುರವರ 111 ನೇ ಜನ್ಮದಿನಾಚರಣೆ ಸಮಾರಂಭ ಕಾರ್ಯಕ್ರಮ ನಗರದ ಮುಳಗುಂದ ರೋಡ್ ಕನಕ ಭವನದಲ್ಲಿ ಗುರುವಾರ ಆಗಸ್ಟ್ (20) ರಂದು ದಿ ॥ ಡಿ. ದೇವರಾಜ ಅರಸುರವರ 111 ನೇ ಜನ್ಮದಿನಾಚರಣೆ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಹೊಸ ಚಿಗುರು – ಹಳೆ ಬೇರು" ಎಂಬ ತತ್ವದಂತೆ, ಅರಸು ಅವರು ತಮ್ಮ ಅಧಿಕಾರದ ಅವಧಿಯಲ್ಲಿ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಸಿಗಬೇಕೆಂಬ ದೂರದೃಷ್ಟಿಯಿಂದ ಶ್ರಮಿಸಿದರು.

ಉಳುವವನೇ ಭೂಮಿಯ ಒಡೆಯ' ಎಂಬ ಭೂ ಸುಧಾರಣೆ ಕಾಯ್ದೆಯನ್ನು ಅರಸು ಅವರು ಜಾರಿಗೆ ತಂದರು. 'ಉಳುವವನೇ ಭೂಮಿಯ ಒಡೆಯ' ಕಾಯ್ದೆಯು ರಾಜ್ಯದ ಇತಿಹಾಸದಲ್ಲೇ ಮಹತ್ವದ ಮೈಲಿಗಲ್ಲು. ಅಂದು ಬಡ ರೈತರಿಗೆ ಭೂಮಿಯ ಒಡೆತನ ಸಿಕ್ಕಿದ್ದರಿಂದ ಇಂದು ರಾಜ್ಯದ ಶೇ. 30 ಕ್ಕಿಂತ ಹೆಚ್ಚು ರೈತರು ಸ್ವಂತ ಭೂಮಿಯಲ್ಲಿ ಸಾಗುವಳಿ ಮಾಡುತ್ತಿದ್ದಾರೆ. ಒಂದೇ ರಾತ್ರಿಯಲ್ಲಿ ಲಕ್ಷಾಂತರ ಬಡ ಕುಟುಂಬಗಳು ಜಮೀನಿನ ಒಡೆಯರಾಗುವಂತೆ ಮಾಡಿದ ಕ್ರಾಂತಿಕಾರಿ ಹೆಜ್ಜೆ ಇದಾಗಿತ್ತು ಎಂದರು. ಹಿಂದುಳಿದ ವರ್ಗಗಳಿಗೆ ಸಾಮಾಜಿಕ ಸ್ಥಾನಮಾನ ಹಾಗೂ ಉದ್ಯೋಗಗಳಲ್ಲಿ ಶಿಕ್ಷಣದಲ್ಲಿ ನ್ಯಾಯಯುತ ಪಾಲು ಸಿಗಬೇಕೆಂಬ ಉದ್ದೇಶದಿಂದ ಶರಣರ, ಹಿಂದುಳಿದವರ ಸಮೀಕ್ಷೆ ನಡೆಸಿ ಬಿಸಿಆರ್ (ಃಅಖ) ಸಾಮಾಜಿಕ ನ್ಯಾಯ ಹಾಗೂ ಮೀಸಲಾತಿಯನ್ನು ಜಾರಿಗೆ ತಂದರು. ಮಂಡಲ್ ಕಮಿಷನ್ ಬರುವ ಮುನ್ನವೇ ರಾಜ್ಯದಲ್ಲಿ ಶೇ. 70 ರಷ್ಟು ಮೀಸಲಾತಿ ಕಲ್ಪಿಸಿದ ಹೆಗ್ಗಳಿಕೆ ಅವರದ್ದು ಎಂದು ಹೇಳಿದರು.

ಯುವಜನತೆ ಮತ್ತು ನಿರುದ್ಯೋಗಿಗಳಿಗೆ ಪ್ರೋತ್ಸಾಹ ಧನ ನೀಡುವ ಉದ್ದೇಶದಿಂದ ಪದವೀಧರ ನಿರುದ್ಯೋಗಿಗಳಿಗೆ ಸ್ಟೈಫಂಡ್ ನೀಡುವ ಯೋಜನೆ ಸೇರಿದಂತೆ ಶಿಕ್ಷಣ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಆದ್ಯತೆ ನೀಡುವ ಕ್ರಾಂತಿಕಾರಿ ಯೋಜನೆಗಳನ್ನು ಜಾರಿಗೆ ತಂದರು ಎಂದರು. ರಾಷ್ಟ್ರೀಯ ರಾಜಕೀಯದ ದಿಕ್ಸೂಚಿಯಾದ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರು ಸಂಸತ್ತಿಗೆ ಮರು ಆಯ್ಕೆಯಾಗಲು ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿದಾಗ, ಅವರಿಗೆ ರಾಜಕೀಯ ಮರುಜನ್ಮ ನೀಡಿ ಕೇಂದ್ರ



ರಾಜಕೀಯದಲ್ಲೂ ಕಾಂಗ್ರೆಸ್ ಪಕ್ಷ ಬಲವಾಗಿ ನೆಲೆಯೂರುವಂತೆ ಮಾಡುವಲ್ಲಿ ಅರಸು ಅವರ ಪಾತ್ರ ಪ್ರಮುಖವಾಗಿತ್ತು ಎಂದು ಹೇಳಿದರು. "ಇಂದು ನಾವು ಅನುಭವಿಸುತ್ತಿರುವ ಸಾಮಾಜಿಕ ಭದ್ರತೆ ಮತ್ತು ಅಭಿವೃದ್ಧಿಗೆ ದೇವರಾಜ ಅರಸು ಅವರು ಹಾಕಿಕೊಟ್ಟ ಭದ್ರ ಅಡಿಪಾಯವೇ ಕಾರಣ. ಅವರ ಸಾಧನೆಗಳನ್ನು ಸ್ಮರಿಸುವುದು ಮಾತ್ರವಲ್ಲದೆ, ಅವರು ತೋರಿದ ಹಾದಿಯಲ್ಲಿ ಸಾಗುವುದು ಮತ್ತು ಸಮಾಜದ ಏಳಿಗೆಗೆ ಶ್ರಮಿಸುವುದೇ ನಾವು ಅವರಿಗೆ ನೀಡುವ ನಿಜವಾದ ಗೌರವ," ಎಂದು ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕಾರ್ಯಕ್ರಮದಲ್ಲಿ ತಾಲೂಕು ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿ ಹಾಗೂ ಉಪನ್ಯಾಸಕ ಪ್ರಭಾಕರ ಉಳ್ಳಾಗಡ್ಡಿ ಮಾತನಾಡಿ ಡಿ. ದೇವರಾಜ ಅರಸು ಅವರು ಹಿಂದುಳಿದ ವರ್ಗಗಳು, ಬಡವರು ಹಾಗೂ ಶೋಷಿತ ಸಮುದಾಯಗಳ ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಗಾಗಿ ಹಲವು ಮಹತ್ವದ ಸುಧಾರಣೆಗಳನ್ನು ಜಾರಿಗೆ ತಂದಿದ್ದರು ಎಂದು ಹೇಳಿದರು.

ಸಮಾಜದ ಎಲ್ಲ ವರ್ಗಗಳಿಗೂ ಸಮಾನ ಅವಕಾಶ ಕಲ್ಪಿಸುವುದು ಹಾಗೂ ಶೋಷಿತ ಮತ್ತು ಹಿಂದುಳಿದ ಜನರನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಅರಸು ಅವರ ಕೊಡುಗೆ ಅಪಾರವಾಗಿದೆ. ಅವರ ಆಡಳಿತದ ಅವಧಿಯಲ್ಲಿ ಜಾರಿಗೊಂಡ ಜನಪರ ಹಾಗೂ ಸಾಮಾಜಿಕ ಸುಧಾರಣಾ ಕ್ರಮಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಅವರು ತಿಳಿಸಿದರು. ಉಳುವವನೇ ಭೂಮಿಯ ಒಡೆಯ ಎಂಬ ಕಾಯ್ದೆಯನ್ನು ಅರಸು ಅವರು ಜಾರಿಗೆ ತಂದ ಐತಿಹಾಸಿಕ ಭೂಸುಧಾರಣಾ ಕಾಯ್ದೆಯು ಶೋಷಿತ ಮತ್ತು ಹಿಂದುಳಿದ ವರ್ಗಗಳ ಜನರಿಗೆ ಸ್ವಾವಲಂಬನೆ ಹಾಗೂ ಆತ್ಮಗೌರವವನ್ನು ತಂದುಕೊಟ್ಟಿತು. ಹಿಂದುಳಿದ ವರ್ಗಗಳಿಗೆ ಶೈಕ್ಷಣಿಕ ಮತ್ತು ಉದ್ಯೋಗಾವಕಾಶಗಳಲ್ಲಿ ಸೂಕ್ತ ಪ್ರಾತಿನಿಧ್ಯ ಸಿಗುವಂತೆ ಮಾಡಲು ಎಲ್. ಜಿ. ಹಾವನೂರು ವರದಿಯನ್ನು ಜಾರಿಗೆ ತಂದ ಶ್ರೇಯಸ್ಸು ಅರಸು ಅವರಿಗೆ ಸಲ್ಲುತ್ತದೆ. ಹಿಂದುಳಿದ ಮತ್ತು ದಲಿತ ವರ್ಗದ ವಿದ್ಯಾರ್ಥಿಗಳಿಗಾಗಿ ವಸತಿ ನಿಲಯಗಳನ್ನು (ಹಾಸ್ಟೆಲ್) ಪ್ರಾರಂಭಿಸಿ, ಶಿಕ್ಷಣ ಪ್ರತಿಯೊಬ್ಬರಿಗೂ ಸಿಗುವಂತೆ ಮಾಡಿದರು ಎಂದರು. ಸರ್ಕಾರವು ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಜಾರಿಗೆ ತಂದಿರುವ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳು ಸರಿಯಾದ ರೀತಿಯಲ್ಲಿ ಬಳಸಿಕೊಂಡು ಅಭಿವೃದ್ಧಿ ಹೊಂದಬೇಕೆಂದು ಎಂದರು. ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಜನಪರ ಆಡಳಿತದ ಆಶಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಡಿ. ದೇವರಾಜ ಅರಸು ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದ ದುರ್ಬಲ ವರ್ಗಗಳ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ತಾಲೂಕು ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿ ಪ್ರಭಾಕರ ಉಳ್ಳಾಗಡ್ಡಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಬಸವರಾಜ .ವಿ. ಬಳ್ಳಾರಿ ಮಾತನಾಡಿ ಸಾಮಾಜಿಕ ಸಮಾನತೆ, ಶೋಷಿತ ವರ್ಗಗಳ ಏಳಿಗೆ ಹಾಗೂ ಶೈಕ್ಷಣಿಕ ಪ್ರಗತಿಗೆ ತಳಪಾಯ ಹಾಕಿದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ಕೊಡುಗೆ ಇಡೀ ಕರ್ನಾಟಕಕ್ಕೆ ಐತಿಹಾಸಿಕವಾಗಿದೆ ಎಂದು ಹೇಳಿದರು.

ಶೋಷಿತರು, ದಲಿತರು, ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗಗಳ ಸರ್ವಾಂಗೀಣ ಏಳಿಗೆಗೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಧೀಮಂತ ನಾಯಕ ಸಾಮಾಜಿಕ ಕ್ರಾಂತಿಯ ಹರಿಕಾರ ಡಿ. ದೇವರಾಜ ಅರಸುರವರು ಎಂದರು. ಉಳುವವನೇ ಭೂಮಿಯ ಒಡೆಯ" ಕಾಯ್ದೆಯ ಮೂಲಕ ಲಕ್ಷಾಂತರ ಬಡ ರೈತರು ಮತ್ತು ಶೋಷಿತರಿಗೆ ಭೂಮಿಯ ಹಕ್ಕು ನೀಡಿ, ಸಮಾಜದಲ್ಲಿ ನೆಮ್ಮದಿ ಹಾಗೂ ಆತ್ಮಗೌರವದಿಂದ ಬದುಕಲು ದಾರಿ ಮಾಡಿಕೊಟ್ಟರು ಎಂದು ಹೇಳಿದರು. ಶೈಕ್ಷಣಿಕ ಮೂಲಸೌಕರ್ಯ ಹಾಗೂ ವಸತಿ ನಿಲಯಗಳು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯಲು ಅನುಕೂಲವಾಗುವಂತೆ ನೂರಾರು ವಸತಿ ನಿಲಯಗಳನ್ನು (ಹಾಸ್ಟೆಲ್) ಪ್ರಾರಂಭಿಸಿದರು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಮೂಲಕ ಹೊಸ ಶೈಕ್ಷಣಿಕ ಕ್ರಾಂತಿಗೆ ಮುನ್ನುಡಿ ಬರೆದರು ಎಂದರು. ಗದಗ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಇಲಾಖೆ ಹಾಗೂ ಜಿಲ್ಲಾಡಳಿತದ ಶ್ರಮದಿಂದ ಸುಮಾರು 48ಕ್ಕೂ ಹೆಚ್ಚು ವಸತಿ ನಿಲಯಗಳು, ವಸತಿ ಶಾಲೆಗಳು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾವಿರಾರು ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಹಿತಕಾಯುತ್ತಿವೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಬಸವರಾಜ .ವಿ. ಬಳ್ಳಾರಿ ಹೇಳಿದರು. ಜಿಲ್ಲಾ ಹಾಲುಮತ ಸಂಘದ ಅಧ್ಯಕ್ಷರಾದ ಫಕೀರಪ್ಪ ಹೇಬಸೂರ ಮಾತನಾಡಿ ಹಿಂದುಳಿದ ವರ್ಗಗಳ, ದಲಿತರ ಹಾಗೂ ಶೋಷಿತರ ಬದುಕಿನಲ್ಲಿ ಹೊಸ ಭರವಸೆ ಮೂಡಿಸಿ, ಶೈಕ್ಷಣಿಕ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆ ತಂದ ಮಹಾನ್ ಧೀಮಂತ ನಾಯಕ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಎಂದು ಹೇಳಿದರು.

ಸಾಮಾಜಿಕ ನ್ಯಾಯ ಮತ್ತು ಹೋರಾಟಕ್ಕೆ ಹಿಂದುಳಿದ ವರ್ಗಗಳ ಏಳಿಗೆಗಾಗಿ ಅರಸು ಅವರು ರೂಪಿಸಿದ ಯೋಜನೆಗಳು ಹಾಗೂ ತಂದ ಭೂಸುಧಾರಣಾ ಕಾಯ್ದೆ ಬಡವರ ಆತ್ಮಗೌರವದ ಬದುಕಿಗೆ ಬಲ ನೀಡಿದೆ. ಶೋಷಿತ ಸಮುದಾಯಗಳನ್ನು ಸಂಘಟಿಸಿ ಅವರಿಗೆ ರಾಜಕೀಯ ಹಾಗೂ ಸಾಮಾಜಿಕ ಪ್ರಾತಿನಿಧ್ಯ ದೊರಕಿಸಿಕೊಟ್ಟ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ ಎಂದರು. ಬಡ ಹಾಗೂ ಹಿಂದುಳಿದ ವರ್ಗದ ಮಕ್ಕಳು ಉನ್ನತ ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಉದಾತ್ತ ಉದ್ದೇಶದಿಂದ ರಾಜ್ಯಾದ್ಯಂತ ವಸತಿ ನಿಲಯಗಳನ್ನು (ಹಾಸ್ಟೆಲ್) ಸ್ಥಾಪಿಸಿದರು. ಈ ವಸತಿ ನಿಲಯಗಳು ಲಕ್ಷಾಂತರ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಆಸರೆಯಾಗಿವೆ ಎಂದು ಹೇಳಿದರು. ಇಂದಿನ ಪೀಳಿಗೆಗೆ ಅರಸು ಅವರ ತತ್ವ ಮತ್ತು ಚಿಂತನೆಗಳನ್ನು ತಿಳಿಸಿಕೊಡುವುದು ಅತ್ಯಗತ್ಯ. ಪೋಷಕರು ತಮ್ಮ ಮಕ್ಕಳಿಗೆ ಕೇವಲ ಮೊಬೈಲ್ ಅಥವಾ ಆಧುನಿಕ ವ್ಯಾಮೋಹಗಳಿಗೆ ಅವಕಾಶ ನೀಡದೆ, ಉತ್ತಮ ಶಿಕ್ಷಣ ಹಾಗೂ ಸಂಸ್ಕಾರ ನೀಡಬೇಕು ಎಂದರು. ಅಬ್ದುಲ್ ಕಲಾಂ ಮಾದರಿ ಯುವಜನತೆಯಲ್ಲಿ ರೂಪುಗೊಳ್ಳಲಿ ನಮ್ಮ ಮಕ್ಕಳು ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರಂತಹ ಮಹಾನ್ ವಿಜ್ಞಾನಿಗಳು, ದೇಶಪ್ರೇಮಿಗಳು ಹಾಗೂ ಸಮಾಜ ಸುಧಾರಕರಾಗಿ ಬೆಳೆಯಬೇಕು. ಶೈಕ್ಷಣಿಕವಾಗಿ ಮತ್ತು ತಾಂತ್ರಿಕವಾಗಿ ಮುನ್ನಡೆಯುವ ಮೂಲಕ ಸಮಾಜ ಹಾಗೂ ದೇಶಕ್ಕೆ ಉತ್ತಮ ಹೆಸರು ತರಬೇಕು ಎಂದು ಜಿಲ್ಲಾ ಹಾಲುಮತ ಸಂಘದ ಅಧ್ಯಕ್ಷ ಫಕೀರಪ್ಪ ಹೆಬಸೂರ ಹೇಳಿದರು. ಈ ಕಾರ್ಯಕ್ರಮದಲ್ಲಿ ನಗರಾಭಿರುದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ. ಆರ್. ಮುಂಡರಗಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ.ನಂದಾ ಹಣಬರಟ್ಟಿ,ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅಮಿತ ಬಿದರಿ, ರಾಜ್ಯ ನೌಕರರ ಸಂಘದ ಮಾಜಿ ಜಿಲ್ಲಾಧ್ಯಕ್ಷ ರವಿ .ಎಲ್. ಗುಂಜಿಕರ, ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ರವಿ ದಂಡಿನ, ತಹಶೀಲ್ದಾರ್ ಶ್ರೀನಿವಾಸ ಕುಲಕರ್ಣಿ, ರಾಜ್ಯ ಹಾಲುಮತ ಸಂಘದ ಅಧ್ಯಕ್ಷ ರುದ್ರಣ್ಣ ಗುಳಗುಳಿ, ಅಲೆಮಾರಿ ಸಂಘದ ಜಿಲ್ಲಾಧ್ಯಕ್ಷ ಹರೀಶ್ ಪೂಜಾರ ಸೇರಿದಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ವಸತಿ ನಿಲಯದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್. ಸಿ, ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಕ್ರೀಡಾಕೂಟದಲ್ಲಿ ವಿಜೇತರಾದ ಮೆಟ್ರಿಕ ಪೂರ್ವ ಹಾಗೂ ಮೆಟ್ರಿಕ ನಂತರದ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಲಾಯಿತು. ರಾಜ್ಯ ಪ್ರಶಸ್ತಿ ವಿಜೇತ ಜನಪದ ಕಲಾವಿದ ವೀರಣ್ಣ ಅಂಗಡಿ ದಿ ॥ ಡಿ. ದೇವರಾಜ ಅರಸುರವರ 111 ನೇ ಜನ್ಮದಿನಾಚರಣೆ ಕುರಿತು ಸ್ವರಚಿತ ಗೀತೆ ಪ್ರಸ್ತುತ ಪಡಿಸಿದರು. ಇದೇ ಸಂಧರ್ಭದಲ್ಲಿ ಜನಪದ ಕಲಾವಿದ ವೀರಣ್ಣ ಅಂಗಡಿ ಮತ್ತು ಸಂಗಡಿಗರು ನಾಡಗೀತೆ ಪ್ರಸ್ತುತ ಪಡಿಸಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಮೆಹಬೂಬ. ಎಮ್. ತುಂಬರಮಟ್ಟಿ ಸರ್ವರನ್ನು ಸ್ವಾಗತಿಸಿದರು. ತಾಲೂಕು ಹಿಂದುಳಿದ ವರ್ಗಗಳ ವಿಸ್ತಣಾಧಿಕಾರಿ ಜಿ .ಎನ್. ಮಲ್ಲೂರು ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯದ ನಿಲಯ ಪಾಲಕ ಡಿ.ಎಚ್. ವಸ್ತಾದ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ದೇಶದಾದ್ಯಂತ ತೀವ್ರ ಚರ್ಚೆಗೆ ಗ್ರಾಸವಾಗಿದೆ 4 ತಿಂಗಳಲ್ಲಿ 22 ಮರಣದಂಡನೆ ಶಿಕ್ಷೆ ತೀರ್ಪು

ನವದೆಹಲಿ: ಉತ್ತರ ಪ್ರದೇಶದ ಮುಜಫರ್‌ನಗರದ ತ್ವರಿತ ನ್ಯಾಯಾಲಯದ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರವಿಕುಮಾರ್ ದಿವಾಕರ್ ಅವರು ಕಳೆದ ನಾಲ್ಕು ತಿಂಗಳುಗಳಲ್ಲಿ ನೀಡಿದ ಕಠಿಣ ಹಾಗೂ ದಿಟ್ಟ ತೀರ್ಪುಗಳ ಮೂಲಕ ಇಡೀ ದೇಶದ ಗಮನ ಸೆಳೆದಿದ್ದಾರೆ.

ಕೇವಲ 4 ತಿಂಗಳ ಅವಧಿಯಲ್ಲಿ 10 ಪ್ರತ್ಯೇಕ ಕೊಲೆ ಪ್ರಕರಣಗಳಲ್ಲಿ ಒಟ್ಟು 22 ವ್ಯಕ್ತಿಗಳಿಗೆ ಮರಣದಂಡನೆ ಶಿಕ್ಷೆ ವಿಧಿಸಿರುವುದು ನ್ಯಾಯಾಂಗ ವಲಯದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ. ಈ ಬೆಳವಣಿಗೆಯ ಬೆನ್ನಲ್ಲೇ, ಅವರ ನ್ಯಾಯಾಲಯದಲ್ಲಿದ್ದ ಸುಮಾರು 100 ಕೊಲೆ ಪ್ರಕರಣಗಳನ್ನು ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ವೀರೇಂದ್ರ ಕುಮಾರ್ ಸಿಂಗ್ ಅವರ ನ್ಯಾಯಾಲಯಕ್ಕೆ ವರ್ಗಾಯಿಸಲಾಗಿದೆ. ಕಳೆದ 4 ತಿಂಗಳಲ್ಲಿ 10 ಪ್ರಕರಣಗಳಲ್ಲಿ 22 ಜನರಿಗೆ ಮರಣದಂಡನೆ ವಿಧಿಸಲಾಗಿದೆ. ಮರಣದಂಡನೆ ಅಥವಾ ಜೀವಾವಧಿ ಶಿಕ್ಷೆಗೆ ಒಳಪಡುವ ಸುಮಾರು 100 ಬಾಕಿ ಕೊಲೆ ಪ್ರಕರಣಗಳನ್ನು ಬೇರೆ ನ್ಯಾಯಾಲಯಕ್ಕೆ ವರ್ಗಾಯಿಸಲಾಗಿದೆ.ನ್ಯಾಯಾಲಯವು ಸರಣಿಯಾಗಿ ಮರಣದಂಡನೆ ವಿಧಿಸುತ್ತಿರುವ ವೇಗ ಮತ್ತು ಕಠಿಣತೆಯ ಬಗ್ಗೆ ಸ್ಥಳೀಯ ವಕೀಲರು ಹಾಗೂ ಕಕ್ಷಿದಾರರಲ್ಲಿ ಆತಂಕ ವ್ಯಕ್ತವಾಗಿದೆ ಎಂದು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪ್ರಮೋದ್ ತ್ಯಾಗಿ ತಿಳಿಸಿದ್ದಾರೆ.




**ನ್ಯಾಯಾಧೀಶ ರವಿಕುಮಾರ್ ದಿವಾಕರ್ ಹಿನ್ನೆಲೆ :**

46 ವರ್ಷದ ಲಕ್ನೋ ನಿವಾಸಿಯಾಗಿರುವ ರವಿಕುಮಾರ್ ದಿವಾಕರ್ ಅವರು ಬಿಕಾಂ ಮತ್ತು ಎಲ್‌ಎಲ್‌ಎಂ ಪದವಿ ಪಡೆದಿದ್ದಾರೆ. 2009ರಲ್ಲಿ ಅಜಂಗಢದಲ್ಲಿ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾಗಿ ತಮ ವೃತ್ತಿಜೀವನ ಆರಂಭಿಸಿದ ಅವರು, 2015ರಲ್ಲಿ ಸುಲ್ತಾನಪುರದಲ್ಲಿ ಬಡ್ತಿ ಪಡೆದರು. ಇವರು ಈ ಹಿಂದೆ 2022ರಲ್ಲಿ ವಾರಾಣಸಿಯ ಜ್ಞಾನವಾಪಿ ಸಂಕೀರ್ಣದ ವೀಡಿಯೊಗ್ರಫಿ ಸಮೀಕ್ಷೆ ನಡೆಸಲು ಆದೇಶ ಹೊರಡಿಸುವ ಮೂಲಕ ದೇಶಾದ್ಯಂತ ವ್ಯಾಪಕ ಸುದ್ದಿಯಲ್ಲಿದ್ದರು. ನವೆಂಬರ್ 2025 ರಿಂದ ಮುಜಫರ್‌ನಗರದಲ್ಲಿ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್?ಸ ನ್ಯಾಯಾಧೀಶರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

**ಪ್ರಮುಖ ತೀರ್ಪುಗಳ ಪಟ್ಟಿ :**

ಆಗಸ್ಟ್ 13 (12 ವರ್ಷ ಹಳೆಯ ಪ್ರಕರಣ): 2014ರ ಶಾಮ್ಲಿ ಜಿಲ್ಲೆಯ ಹಳೆಯ ದ್ವೇಷದ ಕೊಲೆ ಪ್ರಕರಣದಲ್ಲಿ ರಾಮ್‌ವೀರ್, ರಾಜೀವ್, ರಾಹುಲ್ ಮತ್ತು ಹರೇಂದರ್ ಕುಮಾರ್ ಎಂಬುವವರಿಗೆ ಮರಣದಂಡನೆ ಹಾಗೂ ತಲಾ 1.70 ಲಕ್ಷ ರೂ. ದಂಡ ವಿಧಿಸಲಾಯಿತು. ಆಗಸ್ಟ್ 12 (1999ರ ಸುಲಿಗೆ ಪ್ರಕರಣ): 27 ವರ್ಷಗಳ ಹಿಂದೆ 5 ಲಕ್ಷ ರೂ. ಸುಲಿಗೆಗಾಗಿ ಮರದ ವ್ಯಾಪಾರಿ ಸಲೀಂ ಅವರನ್ನು ಅಪಹರಿಸಿ ಕತ್ತು ಸೀಳಿ ಕೊಂದ ಶಹನವಾಜ್ ಎಂಬಾತನಿಗೆ ಮರಣದಂಡನೆ ಶಿಕ್ಷೆ ನೀಡಲಾಯಿತು.

**ಜುಲೈ 17 (2011ರ ರೈತ ಕೊಲೆ):**

ದರೋಡೆ ಯತ್ನವನ್ನು ವಿರೋಧಿಸಿದ ರೈತ ರಾಜ್ ಸಿಂಗ್ ಹತ್ಯೆ ಪ್ರಕರಣದಲ್ಲಿ ನಾಲ್ವರಿಗೆ ಮರಣದಂಡನೆ ವಿಧಿಸಲಾಯಿತು. ಜುಲೈ 6 (2010ರ ರಾಜಬೀರ್ ಸಿಂಗ್ ಕೊಲೆ): ಪಂಚಾಯತ್ ಚುನಾವಣಾ ದ್ವೇಷದ ಹಿನ್ನೆಲೆಯಲ್ಲಿ 60 ವರ್ಷದ ವ್ಯಕ್ತಿಯನ್ನು ಹತ್ಯೆ ಮಾಡಿದ್ದ ಮಾಜಿ ಗ್ರಾಮ ಮುಖ್ಯಸ್ಥ ಪ್ರಮೋದ್ ಮತ್ತು ಸಹಚರ ಸಹದೇವ್ ಅವರಿಗೆ ಮರಣದಂಡನೆ ನೀಡಲಾಯಿತು.

ಜುಲೈ 2 (ಕರ್ತವ್ಯನಿರತ ಗೃಹರಕ್ಷಕ ದಳದ ಸಿಬ್ಬಂದಿ ಕೊಲೆ): 2020ರಲ್ಲಿ ತಾಯಿಯ ಮೇಲಿನ ಹಲ್ಲೆ ತಡೆಯಲು ಬಂದ ಗಹರಕ್ಷಕ ದಳದ ಸಿಬ್ಬಂದಿ ರತಿರಾಮ್ ಅವರನ್ನು ಚಾಕುವಿನಿಂದ ಇರಿದು ಕೊಂದ ದೀಪಕ್ ಎಂಬಾತನಿಗೆ ಅಪರೂಪದಲ್ಲಿ ಅಪರೂಪದ ಪ್ರಕರಣವೆಂದು ಪರಿಗಣಿಸಿ ಮರಣದಂಡನೆ ವಿಧಿಸಲಾಯಿತು.

**ಮೇ 30 (ಜೋಡಿ ಕೊಲೆ ಪ್ರಕರಣ):**

2011ರಲ್ಲಿ ಮಹಿಳೆ (ರಾಜೇಶ್ ದೇವಿ) ಮತ್ತು ಆಕೆಯ 6 ವರ್ಷದ ಮಗುವನ್ನು ಇಟ್ಟಿಗೆಯಿಂದ ಹೊಡೆದು ಕೊಂದ ರಾಹಿಸ್ ಎಂಬಾತನಿಗೆ ಮರಣದಂಡನೆ ವಿಧಿಸಲಾಯಿತು.

**ಏಪ್ರಿಲ್ 28 ಹಾಗೂ ಏಪ್ರಿಲ್ 6:**

2019ರ ಪ್ರತ್ಯೇಕ ಕೊಲೆ ಮತ್ತು ವಕೀಲರ ಅಪಹರಣ–ಕೊಲೆ ಪ್ರಕರಣಗಳಲ್ಲಿ ಮಹಿಳೆ, ಆಕೆಯ ಮೂವರು ಗಂಡು ಮಕ್ಕಳು ಸೇರಿದಂತೆ ಹಲವರಿಗೆ ಮರಣದಂಡನೆ ಶಿಕ್ಷೆ ವಿಧಿಸಿ ತೀರ್ಪು ನೀಡಲಾಗಿತ್ತು. ಪ್ರಸ್ತುತ ಈ ಎಲ್ಲಾ ಪ್ರಕರಣಗಳು ಮತ್ತು ನ್ಯಾಯಾಧೀಶರ ಕಠಿಣ ನಿಲುವುಗಳು ಕಾನೂನು ವಲಯದಲ್ಲಿ ಮತ್ತು ಸಾರ್ವಜನಿಕವಾಗಿ ತೀವ್ರ ಚರ್ಚೆಗೆ ಗ್ರಾಸವಾಗಿದ್ದು, ವರ್ಗಾವಣೆಗೊಂಡಿರುವ 100 ಪ್ರಕರಣಗಳ ವಿಚಾರಣೆ ಹೊಸ ನ್ಯಾಯಾಲಯದಲ್ಲಿ ಯಾವ ರೀತಿಯಲ್ಲಿ ಮುಂದುವರಿಯಲಿದೆ ಎಂಬುದು ಕುತೂಹಲ ಮೂಡಿಸಿದೆ.

# ಎನ್‌ಕೌಂಟರ್‌ಗೆ ಪ್ರತೀಕಾರವಾಗಿ ಶಿಲುಬೆಪುರ ಬಳಿ ಅರಣ್ಯಕ್ಕೆ ಬೆಂಕಿಯಿಟ್ಟ ದುಷ್ಕರ್ಮಿಗಳು

ಮೈಸೂರು: ದುಷ್ಕರ್ಮಿಗಳು ಹಚ್ಚಿದ್ದಾರೆ ಎನ್ನಲಾದ ಕಾಡ್ಗಿಚ್ಚಿನಿಂದ ಚಾಮರಾಜನಗರ ಜಿಲ್ಲೆಯ ಶಿಲುಬೆಪುರ ಅರಣ್ಯ ಪ್ರದೇಶದಲ್ಲಿ ಸುಮಾರು 10 ಎಕರೆ ಅರಣ್ಯ ಹಾನಿಗೊಳಗಾಗಿದೆ.

ಇತ್ತೀಚೆಗೆ ಮೂವರು ಶಂಕಿತ ಬೇಟೆಗಾರರು ಹತರಾದ ಘಟನೆ ಬೆನ್ನಲ್ಲೇ ಈ ಘಟನೆ ನಡೆದಿದ್ದು, ಬೇಟೆ ತಡೆ ಶಿಬಿರವೊಂದನ್ನೂ ಧ್ವಂಸಗೊಳಿಸಲಾಗಿದೆ ಎಂದು ಅರಣ್ಯ ಇಲಾಖೆ ಮೂಲಗಳು ತಿಳಿಸಿವೆ. ಪ್ರತೀಕಾರದ ಉದ್ದೇಶದಿಂದ ದುಷ್ಕರ್ಮಿಗಳು ಬೆಂಕಿ ಹಚ್ಚಿರಬಹುದು ಎಂದು ಅರಣ್ಯಾಧಿಕಾರಿಗಳು ಶಂಕಿಸಿದ್ದಾರೆ.ಶಿಲುಬೆಪುರ ಅರಣ್ಯ ಪ್ರದೇಶದಲ್ಲಿ ಬೆಂಕಿ ವ್ಯಾಪಿಸಿ ಸುಮಾರು 10



ಎಕರೆ ಪ್ರದೇಶಕ್ಕೆ ಹಾನಿಯಾಗಿದೆ. ಜಾಗೇರಿ ಸಮೀಪದ ಬೇಟೆ ತಡೆ ಶಿಬಿರವನ್ನೂ ಧ್ವಂಸಗೊಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಚಾಮರಾಜನಗರದ ಕಾವೇರಿ ವನ್ಯಜೀವಿಧಾಮದಲ್ಲಿರುವ ಹಲವು ಬೇಟೆ ತಡೆ ಶಿಬಿರಗಳನ್ನು ಸ್ಫೋಟಕ ಬಳಸಿ ದುಷ್ಕರ್ಮಿಗಳು ಧ್ವಂಸಗೊಳಿಸಿರುವ ಆರೋಪ ಕೇಳಿಬಂದಿದೆ.

ಆಗಸ್ಟ್ 18–19ರ ಮಧ್ಯರಾತ್ರಿ ಕೊತ್ತನೂರು ವಲಯದ ಮಿಂಚಿನಹಳ್ಳಿ, ಭೀಮೇಶ್ವರಿ, ಒಲ್ಲೆಮರದಹಟ್ಟಿ, ಬುಡಿಕೆರೆ, ಬಂದಹಳ್ಳಿ ಮತ್ತು ಕಾಳಿದೊಡ್ಡಿ ಸೇರಿದಂತೆ ಹಲವು ಬೇಟೆ ತಡೆ ಶಿಬಿರಗಳ ಮೇಲೂ ದಾಳಿ ನಡೆದಿದೆ. ಕೊತ್ತನೂರು ವಲಯದ ಮಿಂಚಿನರೆಹಳ್ಳಿಯ ಶಿಬಿರವನ್ನು ಡೈನಮೈಟ್ ಹಾಗೂ ಜೆಲಟಿನ್ ಕಡ್ಡಿಗಳ ಮೂಲಕ ಸ್ಫೋಟಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಸ್ಫೋಟದ ತೀವ್ರತೆಗೆ ಶಿಬಿರದ ಗೋಡೆಗಳು ಹಾನಿಗೊಂಡಿದ್ದು, ಒಳಗಿದ್ದ ಸಾಮಗ್ರಿಗಳು ಸುಟ್ಟುಹೋಗಿವೆ. ಘಟನೆಯಲ್ಲಿ ಯಾರಿಗೂ ಗಾಯವಾಗಿಲ್ಲ.

"JANASHREE TIMES" Kannada daily morning Owner, Published by ANANDAYYA DANAYYA VIRAKTAMATH Address: 229/1, 3 RD CROSS VIVEKANAND NAGAR NEAR WATER TANK, GADAG, KARNATAKA - 582101. Printed at: SHIVANI PRINTERS Printers. Address: AT: HULKOTI T/D: GADAG OFFICE ADDERS: SHIVANI PRINTERS NEW COURT OPPSITE PLOT NO 28 RS NO 312/3B GARAG COMPLEX, GADAG, KARNATAKA - 582101. email: janashreetimes@gmail.com